ಸಂಪುಟ : 9 ಸಂಚಿಕೆ 97 ಪುಟ : 4 ಬೆಲೆ: 3.00 ಶನಿವಾರ ಮೇ 18 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 97 Pages : 4 Price : 3.00 Saturday May 18 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಕಸಾಪ ದತ್ತಿ ಉಪನ್ಯಾಸ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಗದಗ ವತಿಯಿಂದ ದಿ. ಅಳವಂಡಿ ಶಿವಮೂರ್ತಿಸ್ವಾಮಿಗಳ ದತ್ತಿ ಉಪನ್ಯಾಸ ಕಾರ್ಯಕ್ರಮವು ಮೇ 18ರ ಬೆಳಿಗ್ಗೆ 10 ರಾಘವೇಂದ್ರ ಮಠದ ಹತ್ತಿರವಿರುವ ಗಂಟೆಗೆ ಪಂಚಾಚಾರ್ಯ ಶಿಕ್ಷಣ ಮಹಾವಿದ್ಯಾಲಯದಲ್ಲಿ ಜರುಗಲಿದೆ.

'ಕರ್ನಾಟಕ ಏಕೀಕರಣ ಚಳವಳಿ ಮತ್ತು ಅಳವಂಡಿ ಶಿವಮೂರ್ತಿಸ್ವಾಮಿಗಳು' ವಿಷಯದ ಕುರಿತು ಗದುಗಿನ ಮಹಿಳಾ ಸರಕಾರಿ ಪ್ರಥಮದರ್ಜೆ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕರಾದ ಪ್ರೊ. ಎಸ್.ಯು. ಸಜ್ಜನಶೆಟ್ಟರ ಉಪನ್ಯಾಸ ನೀಡುವರು. ಅತಿಥಿಗಳಾಗಿ ಅಳವಂಡಿ ಕರ್ನಾಟಕ ವಿದ್ಯಾವರ್ಧಕ ಸಮಿತಿಯ ಕಾರ್ಯದರ್ಶಿ ವಿಜಯಲಕ್ಷ್ಮಿ ರೇವಣಸಿದ್ಧೇಶ್ವರಸ್ವಾಮಿ ಕಟ್ಟಿಮನಿ ಹಿರೇಮಠ ಭಾಗವಹಿಸುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು. ಜ. ಪಂಚಾಚಾರ್ಯ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಬಿ.ಬಿ. ಹೊಳಗುಂದಿ ಉಪಸ್ಥಿತರಿರುವರು.

ಪರಿಷತ್ತಿನ ಕಾರ್ಯಾಲಯದಲ್ಲಿ ಪ್ರತಿ ಶನಿವಾರ ಸಂಜೆ ನಡೆಯುವ ಕಾರ್ಯಕ್ರಮ ಇರುವುದಿಲ್ಲ. ಆದ್ದರಿಂದ, ಕಸಾಪ ಆಜೀವ ಸದಸ್ಯರು, ಸಾಹಿತ್ಯಾಭಿಮಾನಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಕಾರ್ಯದರ್ಶಿ ಶಿವಾನಂದ ಗಿಡ್ನಂದಿ, ಕಿಶೋರಬಾಬು ನಾಗರಕಟ್ಟಿ, ಸಂಚಾಲಕರಾದ ಡಾ. ದತ್ತಪ್ರಸನ್ನ ಪಾಟೀಲ, ಶ್ರೀಕಾಂತ ಬಡ್ಡೂರ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

---

### 400-600 ರೂ ಮೀರಿ ವಿದ್ಯುತ್ ಬಿಲ್ । ಹೆಸ್ಕಾಂ ವಿರುದ್ಧ ಗರಂ ಆದ ಗೃಹಲಕ್ಷ್ಮಿಯರು

# ಹಲವು ಮನೆಗಳಿಂದ ದೂರವಾದ 'ಗೃಹಜ್ಯೋತಿ'

**■ವಿಜಯಸಾಕ್ಷಿ ಸುದ್ದಿ, ಗದಗ**


ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳು ಈವರೆಗೂ ಲಾಭ ಪಡೆದು ಸರ್ಕಾರವನ್ನು ಹೊಗಳಿ ಬೀಗಿದ್ದರು. ಪ್ರತೀ ತಿಂಗಳ ವಿದ್ಯುತ್ ಬಿಲ್‌ನಲ್ಲಿ ಉಳಿತಾಯವಾದರೆ, ಅದೇ ಹಣವನ್ನು ಬೇರೆ ಕಾರ್ಯಗಳಿಗೆ ವಿನಿಯೋಗಿಸಬಹುದು ಎಂದು ಬಡ ಕುಟುಂಬಗಳ ಮಹಿಳೆಯರು ನೆಮ್ಮದಿಯ ನಿಟ್ಟುಸಿರು ಬಿಟ್ಟಿದ್ದರು. ಆದರೆ, ದಿನಕಳೆದಂತೆ, 'ಗೃಹಜ್ಯೋತಿ'ಯ ಬೆಳಕು ಮಂಕಾಗುತ್ತಿರುವ ಲಕ್ಷಣಗಳು ಗೋಚರಿಸುತ್ತಿವೆ. ಇದಕ್ಕೆ ಕಾರಣವೂ ಇಲ್ಲದಿಲ್ಲ. ಇಷ್ಟು ದಿನ 100 ರೂ ಒಳಗೆ ಬರುತ್ತಿದ್ದ ಬಿಲ್ ಇದೀಗ ಏಕಾಏಕಿ 400-500 ರೂ ಬರತೊಡಗಿದ್ದು, ಉಚಿತ ಎಂದು ಹೇಳಿ ಸರ್ಕಾರ ನಮಗೆ ಮೋಸ ಮಾಡುತ್ತಿದೆ ಎಂದು ಕಿಡಿಕಾರತೊಡಗಿದ್ದಾರೆ.

ಹೆಸ್ಕಾಂ ನೀಡಿದ ಬಿಲ್ ನೋಡಿ ಬಡ ಮಹಿಳೆಯ ಕಂಗಾಲಾಗಿದ್ದಾರೆ. 200 ಯುನಿಟ್ ಉಚಿತ ವಿದ್ಯುತ್ ಯೋಜನೆ ವಿರುದ್ಧ ಗದಗ ನಗರದ ಗಂಗಿಮಡಿ ಬಡಾವಣೆಯ ಮಹಿಳೆಯರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಈ ಬಾಡವಣೆಯಲ್ಲಿ



ಕಡು ಬಡವರೇ ಹೆಚ್ಚಾಗಿ ವಾಸಿಸುತ್ತಿದ್ದು, ದುಡಿದರಷ್ಟೇ ಬದುಕು ಎನ್ನುವ ಸ್ಥಿತಿಯಿದೆ. 200 ಯುನಿಟ್ ಉಚಿತ ವಿದ್ಯುತ್ ಯೋಜನೆ ಆರಂಭದಲ್ಲಿ ಈ ಬಡ ಕುಟುಂಬಗಳಲ್ಲಿ ಖುಷಿ ತಂದಿತ್ತು. ಯೋಜನೆ ಆರಂಭದಲ್ಲಿ 20-30 ರೂಪಾಯಿ ವಿದ್ಯುತ್ ಬಿಲ್ ಬರುತ್ತಿತ್ತು. ಆದರೆ, ಈಗ ಬಹುತೇಕ ಮನೆಗಳಿಗೆ ದುಪ್ಪಟ್ಟು ವಿದ್ಯುತ್ ಬಿಲ್ ಬರತೊಡಗಿದೆ. ಕಡು ಬಡವರಾದ ನಾವು ಪ್ರತಿ ತಿಂಗಳು 400,-600 ರೂ ಬಿಲ್ ತುಂಬುವುದು ಹೇಗೆ ಎಂಬ ಚಿಂತೆ ವ್ಯಕ್ತಪಡಿಸುತ್ತಿದ್ದಾರೆ.

ಸದರಿ ವಿದ್ಯುತ್ ಬಿಲ್ ನೋಡಿ ಬಡ ಮಹಿಳೆಯರು ರೊಚ್ಚಿಗೆದ್ದಿದ್ದಾರೆ. ಚುನಾವಣೆಯಲ್ಲಿ ಭರವಸೆ ನೀಡಿ ಕಾಂಗ್ರೆಸ್ ಮೋಸ ಮಾಡಿದೆ. ಬಡವರ ಬದುಕಿನ ಜೊತೆ ಆಟವಾಡಬಾದು ಎಂದು ಬಹುತೇಕ ಮಹಿಳೆಯರು ಅಪಸ್ವರವೆತ್ತಿದ್ದಾರೆ. ಗದುಗಿನಲ್ಲಿ 200 ಯುನಿಟ್ ಉಚಿತ ವಿದ್ಯುತ್ ಯೋಜನೆ ಹಳ್ಳ ಹಿಡಿದಿದೆ ಎಂದು ಆಕ್ರೋಶ ಹೊರಹಾಕಿದ್ದಾರೆ. ಈ ಬಡಾವಣೆಯ ಬಹುತೇಕ ಮನೆಗಳಲ್ಲಿ ಟಿವಿ, ಫ್ರಿಡ್ಜ್‌ಗಳಿಲ್ಲ. ಪುಟ್ಟ ಪುಟ್ಟ ಮನೆಗಳಲ್ಲಿ ಎರಡು, ಮೂರು ವಿದ್ಯುತ್ ಬಲ್ಬ್‌ಗಳು ಮಾತ್ರ ಬಳಕೆಯಾಗುತ್ತವೆ. ಹೀಗಿದ್ದರೂ 400ರಿಂದ 600 ರೂ ಬಿಲ್ ಬರಲಾರಂಭಿಸಿದ್ದು, ಸಹಜವಾಗಿಯೇ ಚಿಂತೆಗೀಡುಮಾಡಿದೆ.


CSD. GADAG
RRNO : 45485
Account ID : 6350971000
MRCode : 54001122
Personal Details
Name and Address
ROSHANBI M BICHAGATTI
GANGI MADI H.NO 314 GADAG
Connection Details
Tariff : SLT-1
Sanct Load : HP: 0 KW:0.24
GJS Reg Date : 03-07-2023
Average(FY22-23) : 17.69
Entitlement Units : 28
Billing Details
Billing Period : 06/04/2024-06/05/2024
Reading Date : 06/05/2024
BillNo : 635097100005202401
Consumption Details
Pres Rdg : 4372 / NOR
Prev Rdg : 4303
Constant : 1
Consumption : 69.0
Recorded MD : 0
Power Factor : 0.00
Connected Load : 0
Eligible for subsidy : 28.0
Units Chargeable : 41.0
Bill for Consumed Units
Fixed Charges 1.00 x 120.00 : 120.00
Energy Charges 69.00 x 5.90 : 407.10
FPPCA 69.0 x 0.53 : 36.57
Tax @9% : 36.64
Sub Total-1 : 600.31
Graha Jyothi Subsidy by GOK
Fixed Charges 1.00 x 120.00 : 120.00
Energy Charges 28.00 x 5.90 : 165.20
FPPCA 28.0 x 0.53 : 14.84
Tax @9% : 14.87
Sub Total-2 : 314.91
Bill Amount(1-2) : 285.40
Additional Charges
PF Penalty : 0.00
MD Penalty : 0.00
Interest @1% : 2.63
Others : 0.00
Debit or Credit : 0.00
Cur.Dem.Payable : 288.03
Arrears : 382.00
Net Payable : 670.00
Due Date : 20/05/2024

ಈ ಬಗ್ಗೆ ಹೆಸ್ಕಾಂ ಅಧಿಕಾರಿಗಳನ್ನು ವಿಚಾರಿಸಿದರೆ ತಲೆಕೆಡಿಸಿಕೊಳ್ಳುತ್ತಿಲ್ಲ. ಮನೆ ಮಾಲೀಕರ ಗಮನಕ್ಕೂ ತಾರದೇ ಬಿಲ್ ಕಟ್ಟಿಲ್ಲ ಎಂದು ಮನೆಗಳ ವಿದ್ಯುತ್ ಸಂಪರ್ಕ ಸ್ಥಗಿತಗೊಳಿಸಲಾಗುತ್ತಿದೆ. ಜನ ಪ್ರತಿನಿಧಿಗಳು ಬರಲಿ, ಅವರನ್ನೇ ವಿಚಾರಿಸುತ್ತೇವೆ, ಹೇಳುವುದು ಒಂದು, ಮಾಡುವುದು ಇನ್ನೊಂದು ಎಂಬಂತೆ ನಡೆದುಕೊಂಡರೆ ಸುಮ್ಮನಿರುವುದಿಲ್ಲ, ಬಡವರ ಬದುಕಿನೊಂದಿಗೆ ಆಟವಾಡಿದರೆ ಸಂದರ್ಭ ಬಂದಾಗ ತಕ್ಕ ಪಾಠ ಕಲಿಸುತ್ತೇವೆ ಎಂದು ಮಹಿಳೆಯರು ಸರ್ಕಾರದ ವಿರುದ್ಧ ಕಿಡಿಕಾರಿದ್ದಾರೆ.


ಹೀಗೆ ಏಕಾಏಕಿ ನಿಗದಿಗಿಂತ ಹೆಚ್ಚು ಬಿಲ್ ಬರಲು ಕಾರಣವೇನು, ಉಚಿತ ವಿದ್ಯುತ್ ಯೋಜನೆಯ ಲಾಭ ಸಿಗದಿರುವುದೇಕೆ ಎಂಬುದರ ಕುರಿತು ಹೆಸ್ಕಾಂ ಅಧಿಕಾರಿಗಳೇ ಸೂಕ್ತ ಮಾಹಿತಿ, ಪರಿಹಾರ ಸೂಚಿಸಿ, ಈ ಬಡಾವಣೆಯ ಬಡ ಮಹಿಳೆಯರ ಗೊಂದಲ, ಆತಂಕಗಳನ್ನು ದೂರ ಮಾಡುತ್ತಾರಾ ಕಾದು ನೋಡಬೇಕಿದೆ.

---

### ಕಡಿಮೆ ಅಂಕ ಪಡೆದವರಿಗೂ ಪ್ರತಿಷ್ಠಿತ ಕಾಲೇಜುಗಳಲ್ಲಿ ಪ್ರವೇಶ ಒದಗಿಸಲು ಬಸವರಾಜ ಹೊರಟ್ಟಿ ಸೂಚನೆ

## ಸೂಕ್ತ ನಿಯಮಾವಳಿ ರೂಪಿಸಿ

**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**



ಎಸ್.ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಕಡಿಮೆ ಅಂಕ ಪಡೆದ ಮಕ್ಕಳಿಗೂ ಸಹ ರಾಜ್ಯದ ಪ್ರತಿಷ್ಠಿತ ಪದವಿಪೂರ್ವ ಕಾಲೇಜುಗಳಲ್ಲಿ ಪ್ರಥಮ ಪಿ.ಯು.ಸಿ ತರಗತಿ ಪ್ರವೇಶಾತಿ ದೊರೆಯುವಂತೆ ಸರ್ಕಾರ ನಿಯಮಾವಳಿ ರೂಪಿಸಿ ಸದರಿ ನಿಯಮ ಕಟ್ಟುನಿಟ್ಟಾಗಿ ಜಾರಿಗೊಳ್ಳುವಂತೆ ಕ್ರಮ ವಹಿಸಲು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಈ ಕುರಿತು ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಿಗೆ ಪತ್ರ ಬರೆದಿರುವ ಅವರು, ಕೇವಲ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶ ನೀಡುವುದು ಮಕ್ಕಳ ಹಕ್ಕುಗಳ ಉಲ್ಲಂಘನೆ ಎಂದಿದ್ದಾರೆ. ಅನುದಾನಿತ, ಅನುದಾನ ರಹಿತ, ಖಾಸಗಿ ಮತ್ತು ಸರ್ಕಾರಿ ಸೇರಿದಂತೆ ಪ್ರತಿ ಪಿಯು ಕಾಲೇಜಿನಲ್ಲೂ ಎಸ್‌ಎಸ್‌ಎಲ್‌ಸಿಯಲ್ಲಿ ಕನಿಷ್ಠ 35 ಅಂಕಗಳೊಂದಿಗೆ ತೇರ್ಗಡೆಯಾದವರಿಗೆ ಕೂಡಾ ಪ್ರವೇಶ ಸಿಗುವಂತಾಬೇಕು. ಶೇ 35ರಿಂದ 50 ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಶೇ 50ರಷ್ಟು ಸೀಟುಗಳನ್ನು ಮೀಸಲಿಡಬೇಕು. ಶೇ 51ರಿಂದ 75ರಷ್ಟು ಅಂಕ ಪಡೆದವರಿಗೆ ಶೇ 25 ಸೀಟುಗಳನ್ನು ಮೀಸಲಿಡಬೇಕು.

ಉಳಿದವುಗಳನ್ನು ಆಡಳಿತ ಮಂಡಳಿ ಬಯಸುವ ರೀತಿ ನೀಡಬಹುದು ಎಂದು ಸಲಹೆ ನೀಡಿದ್ದಾರೆ. ಕಡಿಮೆ ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಷ್ಠಿತ ಪಿಯು ಕಾಲೇಜುಗಳು ಪ್ರವೇಶ ನಿರಾಕರಿಸುತ್ತಿವೆ. ತಮ್ಮಲ್ಲಿ ಶೇ 94, 95ರ ಮೇಲಿನವರಿಗಷ್ಟೇ ಪ್ರವೇಶ ಎನ್ನುತ್ತಿವೆ. ರಾಜ್ಯದ ಎಲ್ಲಾ ಕಾಲೇಜುಗಳಲ್ಲಿ ಇದೇ ಸ್ಥಿತಿ ನಿರ್ಮಾಣವಾಗಿದೆ. ಹೀಗಾಗಿ ಹೆಸರಾಂತ ಶಾಲೆಗಳಲ್ಲಿ ಕಲಿಯಬೇಕೆಂಬ ಮಕ್ಕಳು-ಪಾಲಕರ ಇಚ್ಛೆ ಈಡೇರದಂತಾಗಿದೆ ಎಂದು ಬಸವರಾಜ ಹೊರಟ್ಟಿ ವಿಷಾದ ವ್ಯಕ್ತಪಡಿಸಿದ್ದಾರೆ.

ರಾಜ್ಯದ ಎಲ್ಲಾ ಬಡ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಷ್ಠಿತ ಕಾಲೇಜುಗಳಲ್ಲಿ ಪ್ರವೇಶ ದೊರೆತು ಇತರ ವಿದ್ಯಾರ್ಥಿಗಳೊಂದಿಗೆ ಜ್ಞಾನಾರ್ಜನೆ ಕೈಗೊಂಡು ಅತ್ಯುತ್ತಮ ಅಂಕ ಗಳಿಸುವ ಮೂಲಕ ಜೀವನದಲ್ಲಿ ಉನ್ನತ ಸಾಧನೆ ಮಾಡುವ ಕನಸನ್ನು ನನಸಾಗಿಸಿಕೊಳ್ಳಬಹುದುದೆಂದು ಅಭಿಪ್ರಾಯಪಟ್ಟಿದ್ದು, ಕೂಡಲೇ ಈ ಸಂಬಂಧ ಸರ್ಕಾರ ಆದೇಶ ಹೊರಡಿಸಬೇಕು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಿಗೆ ಪತ್ರ ಮುಖೇನ ಸೂಚಿಸಿದ್ದಾರೆ.

---

### ತರಬೇತಿ ಪಡೆದ ವಿದ್ಯಾರ್ಥಿಗಳಿಗೆ ಉದ್ಯೋಗ ಖಚಿತ: ಶಾಸಕ ಜಿ.ಎಸ್. ಪಾಟೀಲ

# ರೋಣದಲ್ಲಿ ಜೆಟಿಟಿಸಿ ತರಬೇತಿ ಆರಂಭ

**■ವಿಜಯಸಾಕ್ಷಿ ಸುದ್ದಿ, ರೋಣ**

ರಾಜ್ಯ ಸರಕಾರ ತನ್ನ ಮೊದಲ ಬಜೆಟ್‌ನಲ್ಲಿ ರೋಣ ನಗರಕ್ಕೆ 50 ಕೋಟಿ ರೂ ವೆಚ್ಚದ ಜೆಟಿಟಿಸಿ ತರಬೇತಿ ಕೇಂದ್ರವನ್ನು ಮಂಜೂರು ಮಾಡಿದ ಹಿನ್ನಲೆಯಲ್ಲಿ ಪ್ರಸಕ್ತ ಸಾಲಿನಿಂದ ತರಬೇತಿ ಹೊಂದುವ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಆರಂಭವಾಗಲಿದೆ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ರೋಣ ನಗರಕ್ಕೆ ಜೆಟಿಟಿಸಿ ಆಡಳಿತ ಮಂಡಳಿಯ ಅಧಿಕಾರಿಗಳು ಸ್ಥಳ ವಿಕ್ಷಣೆಗೆ ಆಗಮಿಸಿದ ಸಂಧರ್ಭದಲ್ಲಿ ಶಾಸಕ ಜಿ.ಎಸ್. ಪಾಟೀಲ ಸುದ್ದಿಗೋಷ್ಠಿ ನಡೆಸಿ ಮಾತನಾಡಿದರು.

ರೋಣ ನಗರ ಸೇರಿದಂತೆ ತಾಲೂಕಿನಲ್ಲಿ ತರಬೇತಿ ಶಿಕ್ಷಣ ಕೇಂದ್ರಗಳ ಆವಶ್ಯಕತೆಯಿದೆ ಎಂಬುದನ್ನು ಮನಗಂಡು ರಾಜ್ಯ ಸರಕಾರವನ್ನು ಒತ್ತಾಯಿಸಿದ್ದೆ. ಸರಕಾರ ನನ್ನ ಮನವಿಗೆ ಸ್ಪಂದಿಸಿ ತಾಲೂಕಿಗೆ ಜೆಟಿಟಿಸಿ ಮಹಾವಿದ್ಯಾಲಯವನ್ನು ಮಂಜೂರು ಮಾಡಿದ್ದು, ತರಬೇತಿ



ಪಡೆದ ವಿದ್ಯಾರ್ಥಿಗಳಿಗೆ ಉದ್ಯೋಗ ಖಾತ್ರಿಯಾಗಿ ಸಿಗಲಿದೆ ಎಂದು ಆಶಾಭಾವನೆ ವ್ಯಕ್ತಪಡಿಸಿದರು.

ಮಹಾವಿದ್ಯಾಲಯದ ಹಿರಿಯ ಅಧಿಕಾರಿ ಲಕ್ಷ್ಮೀಕಾಂತ ಮಾತನಾಡಿ, ಜೆಟಿಟಿಸಿ ಕೇಂದ್ರದಲ್ಲಿ ತರಬೇತಿ ಹೊಂದುವ ವಿದ್ಯಾರ್ಥಿಗಳಿಗೆ ವಿದೇಶದಲ್ಲಿಯೂ ಮಾನ್ಯತೆ ಇರಲಿದೆ. ಅಲ್ಲದೆ, ಸರಕಾರದ ಸಂಸ್ಥೆಯಾಗಿರುವುದರಿಂದ ಮಹಾವಿದ್ಯಾಲಯದೊಂದಿಗೆ 365 ಪ್ರತಿಷ್ಠಿತ ಕಂಪನಿಗಳು ಒಪ್ಪಂದ ಮಾಡಿಕೊಂಡಿದ್ದು, ವಿದ್ಯಾರ್ಥಿಗಳಿಗೆ ನಿರುದ್ಯೋಗ ಸಮಸ್ಯೆ ದೂರಾಗಲಿದೆ ಎಂದರು.

ಈಗಾಗಲೇ ರಾಜ್ಯದಲ್ಲಿ 35 ಜೆಟಿಟಿಸಿ ಕೇಂದ್ರ ವಿದ್ಯಾರ್ಥಿಗಳಿಗೆ ಅನೇಕ ಮಹತ್ತರ ವಿಷಯಗಳಲ್ಲಿ ತರಬೇತಿಯನ್ನು ನೀಡುತ್ತಿದ್ದು, ಶಾಸಕರ ಇಚ್ಛೆಯಂತೆ ರೋಣ ನಗರದಲ್ಲಿ ತನ್ನ ಕೇಂದ್ರವನ್ನು ಈ ಸಾಲಿನಿಂದ ಆರಂಭಿಸಲಾಗಿದೆ. ವಿದ್ಯಾರ್ಥಿಗಳು ಮಹಾವಿದ್ಯಾಲಯದಲ್ಲಿ ಸಿಗುವ ಶೈಕ್ಷಣಿಕ ಚಟುವಟಿಕೆಗಳ ಲಾಭವನ್ನು ಪಡೆದುಕೊಳ್ಳಬೇಕು ಎಂದ ಅವರು, ನೂತನ ಕಟ್ಟಡ ನಿರ್ಮಾಣವಾಗುವವರೆಗೆ ಬದಾಮಿ ರಸ್ತೆಯ ಗಿರಡ್ಡಿ ಮಹಾವಿದ್ಯಾಲಯದಲ್ಲಿ ತರಬೇತಿ ಕೇಂದ್ರವನ್ನು ಆರಂಭಿಸಲಾಗುವುದು ಎಂದರು.

ಐ.ಎಸ್. ಪಾಟೀಲ, ಅರವಿಂದ್, ಕೆ.ವಿ. ನಾರಾಯಣ್, ಮಾರುತಿ ಭಜಂತ್ರಿ, ಬಸವರಾಜ ನವಲಗುಂದ ಉಪಸ್ಥಿತರಿದ್ದರು.

> ಜೆಟಿಟಿಸಿಯಲ್ಲಿ ಸದ್ಯ ನಾಲ್ಕು ಕೋರ್ಸ್‌ಗಳನ್ನು ಆರಂಭಿಸಲಾಗುತ್ತಿದ್ದು, 260 ವಿದ್ಯಾರ್ಥಿಗಳಿಗೆ ಅವಕಾಶ ಸಿಗಲಿದೆ. ಇನ್ನು ನಾಲ್ಕು ವರ್ಷದ ಡಿಪ್ಲೋಮಾ ಕೋರ್ಸ್ ಮುಗಿಸಿದ ತಕ್ಷಣ ಒಡಂಬಡಿಕೆ ಮಾಡಿಕೊಂಡ ಕಂಪನಿಗಳಲ್ಲಿ 15ರಿಂದ 20 ಸಾವಿರ ಭತ್ಯೆ ಪಡೆದು ಮತ್ತಷ್ಟು ತರಬೇತಿ ಪಡೆಯುವ ಅವಕಾಶವಿದೆ. ಜೊತೆಗೆ ವಿದೇಶದಲ್ಲಿಯೂ ಕಾರ್ಯನಿರ್ವಹಿಸಲು ಜೆಟಿಟಿಸಿ ಸಹಕರಿಸಲಿದೆ.
>
> **– ಲಕ್ಷ್ಮೀಕಾಂತ.**
> **ಜೆಟಿಟಿಸಿ ಹಿರಿಯ ಅಧಿಕಾರಿ.**

---



ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಅವರ ಮೊಮ್ಮಗಳು, ಡಾ. ಪ್ರಕಾಶ ಸಂಕನೂರ-ಶ್ವೇತಾ ಸಂಕನೂರ ಅವರ ಪುತ್ರಿ ಊರ್ವಿ ಸಂಕನೂರ ಸಿಬಿಎಸ್‌ಇ ಪಠ್ಯಕ್ರಮದ 10ನೇ ವರ್ಗದಲ್ಲಿ ಶೇ 96.8 ಅಂಕ ಗಳಿಸಿ ಅನುಪಮ ಸಾಧನೆಗೈದಿದ್ದಕ್ಕಾಗಿ ತೋಂಟದಾರ್ಯ ಪೀಠದ ಜಗದ್ಗುರು ಶ್ರೀ ಸಿದ್ಧರಾಮ ಶ್ರೀಗಳು ಊರ್ವಿ ಸಂಕನೂರ ಅವರನ್ನು ಸನ್ಮಾನಿಸಿ ಆಶೀರ್ವದಿಸಿದರು.

---

# ಪೊಲೀಸರ ಬಲೆಗೆ ಬಿದ್ದ ಕಳ್ಳರು

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ವಿವಿಧ ಕಳ್ಳತನದ ಪ್ರಕರಣಗಳಲ್ಲಿ ಭಾಗಿಯಾಗಿದ್ದ ನಾಲ್ವರು ಕಳ್ಳರನ್ನು ಬಂಧಿಸುವಲ್ಲಿ ಪಟ್ಟಣದ ಠಾಣೆಯ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಯಶಸ್ವಿಯಾಗಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ಕೈಗೊಳ್ಳಲು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಡಿಎಸ್‌ಪಿ, ಸಿಪಿಐ ಇವರ ನೇತೃತ್ವದಲ್ಲಿ ತಂಡ ರಚನೆ ಮಾಡಿ ಕಳ್ಳರನ್ನು ಬಲೆಗೆ ಬೀಳಿಸಿದ್ದಾರೆ.

ತಾಲೂಕಿನ ಶಿಗ್ಲಿ ಗ್ರಾಮದ ಮನೆಯ ಬಾಗಿಲು ಮುರಿದು ಅಂದಾಜು 1.80 ಲಕ್ಷ ರೂ ಬೆಲೆಯ ಬಂಗಾರದ ಆಭರಣ ಹಾಗೂ ಒಂದು ಲಕ್ಷ ರೂ ನಗದು ಹಣವನ್ನು ಕಳ್ಳರು ದೋಚಿದ್ದರು.




ಹಾವೇರಿ ಜಿಲ್ಲೆಯ ಗುತ್ತಲ ಪೊಲೀಸ್ ಠಾಣೆ ವ್ಯಾಪ್ತಿಯ ನೀರಲಗಿ ಗ್ರಾಮದಲ್ಲಿ ಬೈಕ್ ಕಳ್ಳತನ, ಶಿಗ್ಗಾಂವ ತಾಲೂಕಿನ ಮಂಡಿಗನಾಳ ಗ್ರಾಮದಲ್ಲಿ ಬೈಕ್ ಕಳ್ಳತನ ಮಾಡಿದ್ದರ ಬಗ್ಗೆ ಖಚಿತ ಮಾಹಿತಿ ಪಡೆದು, ವಿಶೇಷ ತಂಡ ರಚಿಸಿ ಬಸವರಾಜ ಮೋಡಿಕೇರ, ಶೇಖಪ್ಪ ಮೋಡಿಕೇರ, ಮಂಜುನಾಥ ಮೋಡಿಕೇರ, ನಾಗರಾಜ ಮೋಡಿಕೇರ ಎಂಬ ನಾಲ್ವರು ಕಳ್ಳರನ್ನು ಪತ್ತೆ ಮಾಡಿ ಬಂಧಿಸಿ ಅವರಿಂದ ಕಳುವು ಮಾಡಿದ ಹಣ, ಒಡವೆ, ಬೈಕುಗಳನ್ನು ವಶಪಡಿಸಿಕೊಂಡಿದ್ದಾರೆ.

ಸದರಿ ಪ್ರಕರಣದಲ್ಲಿ ಆರೋಪಿಗಳನ್ನು ಪತ್ತೆ ಹಚ್ಚಿ ಬಂಧಿಸುವಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಅವರ ಮಾರ್ಗದರ್ಶನದಲ್ಲಿ ಶಿರಹಟ್ಟಿ ಸಿಪಿಐ ನಾಗರಾಜ ಮಾಡಳ್ಳಿ, ಲಕ್ಷ್ಮೇಶ್ವರ ಪಿಎಸ್‌ಐ ಈರಪ್ಪ ರಿತ್ತಿ, ಅಪರಾಧ ವಿಭಾಗದ ಪಿಎಸ್‌ಐ ಚನ್ನಬಸವ ಬಬಲಿ, ಎಎಸ್‌ಐ ಎಮ್.ಎ. ಮೌಲ್ವಿ, ಗುರು ಬೂದಿಹಾಳ, ಸಿಬ್ಬಂದಿಗಳಾದ ಆರ್.ಎಸ್. ಯರಗಟ್ಟಿ, ಎಮ್.ಎ. ಶೇಖ, ಎಮ್.ಎಸ್. ಬಳ್ಳಾರಿ, ಗಣೇಶ ಗ್ರಾಮಪುರೋಹಿತ, ಎಚ್.ಐ. ಕಲ್ಲಣ್ಣನವರ, ಪಾಂಡುರಂಗರಾವ್, ಮಧುಚಂದ್ರ ಧಾರವಾಡ, ಸಂಜು ಕೊರಡೂರ, ಅಪ್ಪಣ್ಣ ರಾಠೋಡ, ಹನುಮರೆಡ್ಡಿ ತಾರಿಕೊಪ್ಪ ಮುಂತಾದವರಿದ್ದರು. ಸಿಬ್ಬಂದಿಗಳ ಕಾರ್ಯಕ್ಕೆ ಎಸ್‌ಪಿ ಬಿ.ಎಸ್. ನೇಮಗೌಡ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

## ಸಂಪಾದಕೀಯ

# ಧಾರ್ಮಿಕ ಭಯೋತ್ಪಾದಕರ ಬಗ್ಗೆ ಇರಲಿ ಎಚ್ಚರಿಕೆ

ಭಯೋತ್ಪಾದಕರು ಎಂದರೆ ಕೇವಲ ಮದ್ದು ಗುಂಡುಗಳನ್ನ ಹಿಡಿದು ಕಂಡ ಕಂಡವರನ್ನ ಗುಂಡಿಟ್ಟು ಕೊಲ್ಲುವವರು ಮಾತ್ರವಲ್ಲ. ಮಂದಿರ, ಮಸೀದಿ ಯಾವುದನ್ನು ನೋಡದೆ ಬಾಂಬ್ ಇಡುವವರು ಅಷ್ಟೇ ಭಯೋತ್ಪಾದಕರಲ್ಲ. ಮಂದಿರ ಮಸೀದಿಯ ಹೊರಗೆ ಮನುಷ್ಯನಲ್ಲಿ ವಿಷ ಬೀಜ ಬಿತ್ತುವ ಮಾತನಾಡುವಂತಹ ಧಾರ್ಮಿಕ ಭಯೋತ್ಪಾದಕರು ನಮ್ಮ ನಡುವೆ ಇದ್ದಾರೆ. ಅಂಥವರ ಬಗ್ಗೆ ಈಗ ಎಚ್ಚರಿಕೆ ವಹಿಸಬೇಕಾಗಿದೆ.

ಸದ್ಯ ಮಲೇಷಿಯಾದಲ್ಲಿ ನೆಲೆಸಿರುವ ಜಾಕೀರ್ ನಾಯಕ್, ವಿವಾದಾತ್ಮಕ ಹೇಳಿಕೆಗಳ ಮೂಲಕ ಧಾರ್ಮಿಕ ಭಯೋತ್ಪಾದಕರ ಸಾಲಿನಲ್ಲಿ ನಿಲ್ಲುವಂತಾಗಿದೆ. ದೇವಸ್ಥಾನ ಅಥವಾ ಚರ್ಚ್ ನಿರ್ಮಾಣ ಕಾರ್ಯದಲ್ಲಿ ಮುಸ್ಲಿಂ ವ್ಯಕ್ತಿ ಭಾಗವಹಿಸುವುದಕ್ಕಿಂತ ಶಸ್ತ್ರಾಸ್ತ್ರಗಳನ್ನ ತಯಾರಿಸುವ ಕಂಪನಿಯನ್ನು ಸೇರಬೇಕು ಎನ್ನುವ ಮೂಲಕ ಮತ್ತೊಂದು ವಿವಾದದ ಕಿಡಿಯನ್ನ ಹೊತ್ತಿಸಿದ್ದಾರೆ.

ದೇವಸ್ಥಾನ ನಿರ್ಮಾಣ ಕಾರ್ಯಕ್ಕೆ ಕೈಜೋಡಿಸುವುದು ಮಹಾ ಪಾಪ, ದೇವಸ್ಥಾನ ನಿರ್ಮಾಣ ಕಾರ್ಯ ಕೈಗೊಳ್ಳುವ ಕಾರ್ಮಿಕನು ಮಹಾ ಪಾಪಿ ಎನ್ನುವ ಮೂಲಕ ಜಾಕೀರ್ ನಾಯಕ್, ಕೋಮು ಸೌಹಾರ್ದವನ್ನು ಕದಡುವ ಹೇಳಿಕೆಯೊಂದನ್ನು ನೀಡಿದ್ದಾರೆ.

ಭಾರತದಂತಹ ಭಾವೈಕ್ಯತೆಯ ದೇಶದಲ್ಲಿ ಹಿಂದೂ ಮುಸ್ಲಿಮರು ಒಟ್ಟಾಗಿ ಬಾಳುತ್ತಿದ್ದಾರೆ. ಕಾರ್ಮಿಕರಲ್ಲಿ ಬಹುಸಂಖ್ಯಾತ ಜನ ಮುಸ್ಲಿಂ ಸಮುದಾಯದವರೇ ಇದ್ದಾರೆ. ಅದರಲ್ಲೂ ಕಟ್ಟಡ ನಿರ್ಮಾಣ ಕಾಮಗಾರಿ ಕೆಲಸದಲ್ಲಿ ಮುಸ್ಲಿಂ ಯುವಕರು ಸಾಕಷ್ಟು ಸಂಖ್ಯೆಯಲ್ಲಿದ್ದಾರೆ ಮತ್ತು ಪರಿಣಿತರು ಆಗಿದ್ದಾರೆ.

ಆ ಎಲ್ಲ ಕಾರ್ಮಿಕರು ಯಾವುದೇ ಪೂರ್ವಗ್ರಹಕ್ಕೆ ಒಳಗಾಗದೆ ನಿರ್ಮಾಣ ಕಾರ್ಯದಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳುತ್ತಾರೆ. ಮಂದಿರ- ಮಸೀದಿ, ಮಠ -ಚರ್ಚು, ಶೌಚಾಲಯ, ಬಹುಮಾಡಿ ಕಟ್ಟಡ ಯಾವುದೇ ಇರಲಿ, ಸಿಕ್ಕ ಕೆಲಸವನ್ನು ಪ್ರಾಮಾಣಿಕವಾಗಿ ಮಾಡಿ ಮುಗಿಸುವುದಷ್ಟೇ ಅವರ ಕೆಲಸ. ಅದರಲ್ಲೂ ಧಾರ್ಮಿಕ ಕಟ್ಟಡ ನಿರ್ಮಾಣ ಕಾಮಗಾರಿ ಆಗಿದ್ದರೆ ಇನ್ನಷ್ಟು ಆಸ್ಥೆ ವಹಿಸಿ ಕೆಲಸ ಮಾಡುತ್ತಾರೆ.

ಇದನ್ನ ಧರ್ಮವಿರೋಧಿ ಎಂದು ಕರೆಯುವುದು ಎಷ್ಟು ಸರಿ. ಕಾಯಕವನ್ನೇ ಕೈಲಾಸ ಮಾಡಿಕೊಂಡ ಕಾರ್ಮಿಕರು ಅದು ಹೇಗೆ ಪಾಪಿಗಳಾಗುತ್ತಾರೆ. ಭಾವೈಕ್ಯತೆಯ ಗಂಧ ಗಾಳಿ ಗೊತ್ತಿರದ ಇಂತಹ ಧಾರ್ಮಿಕ ಭಯೋತ್ಪಾದಕರು ಜನರ ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ. ಮುಸ್ಲಿಂ ಸಮುದಾಯ ಈ ಬಗ್ಗೆ ಎಚ್ಚರಿಕೆ ವಹಿಸಬೇಕು.


## ಹತ್ಯೆ ಆರೋಪಿಗೆ ಗಲ್ಲು ಶಿಕ್ಷೆ ವಿಧಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯ ವೀರಾಪುರ ಓಣಿಯ ಅಂಜಲಿ ಅಂಬಿಗೇರ ಎನ್ನುವ ಯುವತಿಯನ್ನು ಕೊಲೆ ಮಾಡಿದ ಆರೋಪಿಗೆ ಗಲ್ಲು ಶಿಕ್ಷೆ ನೀಡುವಂತೆ ಒತ್ತಾಯಿಸಿ ಗದಗ ಜಿಲ್ಲಾ ಅಂಬಿಗರ ಸಮಾಜ ಬಾಂಧವರು ಹಾಗೂ ಸಮಾಜದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂಗಮೇಶ ಹಾದಿಮನಿ ಒತ್ತಾಯಿಸಿದ್ದಾರೆ. ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ನೇಹಾ ಹಿರೇಮಠ ಹತ್ಯೆಯ ನೆನಪು ಮಾಸುವ ಮುನ್ನವೇ ಹುಬ್ಬಳ್ಳಿಯಲ್ಲಿ ಇನ್ನೋರ್ವ ಯುವತಿಯ ಕೊಲೆ ನಡೆದಿದೆ. ಈ ಕೃತ್ಯದಿಂದ ಇಡೀ ಮಾನವ ಸಮಾಜ ತಲೆ ಬಾಗಿಸುವಂತೆ ಆಗಿದೆ. ಅವಳ ಹತ್ಯೆಯಿಂದ ಕುಟುಂಬ ಬೀದಿಗೆ ಬರಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಕೂಡಲೇ ಪೊಲೀಸ್ ಇಲಾಖೆ ಹಾಗೂ ರಾಜ್ಯ ಸರಕಾರ ಎಚ್ಚೆತ್ತು ಆರೋಪಿಯನ್ನು ಬಂಧಿಸಿ, ಗಲ್ಲುಶಿಕ್ಷೆಗೆ ಒಳಪಡಿಸಬೇಕು. ಮೃತ ಯುವತಿಯ ಕುಟುಂಬಕ್ಕೆ ಸೂಕ್ತ ಪರಿಹಾರವನ್ನು ನೀಡಬೇಕು ಎಂದು ಒತ್ತಾಯಿಸಿದ್ದಾರೆ.

## ಸುಪ್ರೀಂ ಕೋರ್ಟ್ ಬಾರ್ ಅಸೋಸಿಯೇಷನ್ ಅಧ್ಯಕ್ಷರಾಗಿ ಕಪಿಲ್ ಸಿಬಲ್ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಸುಪ್ರೀಂ ಕೋರ್ಟ್ ಬಾರ್ ಅಸೋಸಿಯೇಷನ್ (ಎಸ್‌ಸಿಬಿಎ) ಅಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಹಿರಿಯ ವಕೀಲ ಕಪಿಲ್ ಸಿಬಲ್ ಗೆಲುವು ಸಾಧಿಸಿದ್ದಾರೆ.

ಸಿಬಲ್ 1,066 ಮತಗಳನ್ನು ಪಡೆದರೆ, ಅವರ ಪ್ರತಿಸ್ಪರ್ಧಿ ಹಿರಿಯ ವಕೀಲ ಪ್ರದೀಪ್ ರೈ 689 ಮತಗಳನ್ನು ಪಡೆದಿದ್ದಾರೆ. ಮರು ಆಯ್ಕೆ ಬಯಸಿದ್ದ ನಿರ್ಗಮಿತ ಅಧ್ಯಕ್ಷ, ಹಿರಿಯ ವಕೀಲ ಡಾ ಆದಿಶ್ ಸಿ ಅಗರ್ವಾಲ್ ಅವರ ಪರ 296 ಮತಗಳು ಚಲಾವಣೆಯಾಗಿತ್ತು.

ಸಿಬಲ್ ಅವರು ಎಸ್‌ಸಿಬಿಎ ಅಧ್ಯಕ್ಷರಾಗಿ ಆಯ್ಕೆಯಾಗಿರುವುದು ಇದು ನಾಲ್ಕನೇ ಬಾರಿಯಾಗಿದೆ. ಸಿಬಲ್ ಜೊತೆ ಉಪಾಧ್ಯಕ್ಷರಾಗಿ ರಚನಾ ಶ್ರೀವಾಸ್ತವ್ ಮತ್ತು ಕಾರ್ಯದರ್ಶಿಯಾಗಿ ವಿಕ್ರಾಂತ್ ಯಾದವ್ ಆಯ್ಕೆಯಾಗಿದ್ದಾರೆ.

ಸಿಬಲ್ ಈ ಹಿಂದೆ ಎಸ್‌ಸಿಬಿಎ ಅಧ್ಯಕ್ಷರಾಗಿ ಮೂರು ಬಾರಿ ಚುನಾಯಿತರಾಗಿದ್ದರು. ಕೊನೆಯದಾಗಿ 23 ವರ್ಷಗಳ ಹಿಂದೆ, ಅಂದರೆ 2001ರಲ್ಲಿ ಅವರು ಎಸ್‌ಬಿಎ ಅಧ್ಯಕ್ಷರಾಗಿದ್ದರು. ಅದಕ್ಕೂ ಮುನ್ನ 1995-96 ಮತ್ತು 1997-98 ಅವಧಿಯಲ್ಲೂ ಅವರು ಈ ಸ್ಥಾನಕ್ಕೆ ಆಯ್ಕೆಯಾಗಿದ್ದರು.

ನಿರ್ಗಮಿತ ಅಧ್ಯಕ್ಷ ಆದಿಶ್ ಅಗರ್ವಾಲ್ ಇತ್ತೀಚೆಗೆ 'ಚುನಾವಣಾ ಬಾಂಡ್' ವಿಚಾರದಲ್ಲಿ ಸುದ್ದಿಯಾಗಿದ್ದರು. ಮೋದಿ ಸರ್ಕಾರದ ಚುನಾವಣಾ ಬಾಂಡ್ ಯೋಜನೆ ರದ್ದುಗೊಳಿಸಿ, ಬಾಂಡ್ ಮಾಹಿತಿಗಳನ್ನು ಸಾರ್ವಜನಿಕಗೊಳಿಸುವಂತೆ ಈ ವರ್ಷದ ಫೆಬ್ರವರಿಯಲ್ಲಿ ಸುಪ್ರೀಂ ಕೋರ್ಟ್ ಆದೇಶಿಸಿತ್ತು.

ಈ ಆದೇಶದ ವಿರುದ್ಧ ರಾಷ್ಟ್ರಪತಿಗೆ ಪತ್ರ ಬರೆದಿದ್ದ ಆದಿಶ್ ಅಗರ್ವಾಲ್ ಮಧ್ಯ ಪ್ರವೇಶಿಸುವಂತೆ ಮನವಿ ಮಾಡಿದ್ದರು. ಈ ವಿಚಾರಕ್ಕೆ ಸುಪ್ರೀಂ ಕೋರ್ಟ್ ಅಗರ್ವಾಲ್ ಅವರನ್ನು ತರಾಟೆಗೆ ತೆಗೆದುಕೊಂಡಿತ್ತು. ಎಸ್‌ಬಿಎ ಕಾರ್ಯದರ್ಶಿ ಪ್ರಕಟನೆ ಹೊರಡಿಸಿ, "ಅಗರ್ವಾಲ್ ಬರೆದ ಪತ್ರಕ್ಕೂ ನಮಗೂ ಸಂಬಂಧವಿಲ್ಲ" ಎಂದಿದ್ದರು.

# ಸಿಎಎ ಅಡಿ ಪೌರತ್ವ ನೀಡಿದ ಕೇಂದ್ರ ಸರ್ಕಾರ: ಸುಪ್ರೀಂ ಮೆಟ್ಟಿಲೇರಲು ನಿರ್ಧರಿಸಿದ ಮುಸ್ಲಿಂ ಲೀಗ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಪೌರತ್ವ ತಿದ್ದುಪಡಿ ಕಾಯ್ದೆ (ಸಿಎಎ) ಅಡಿ ಪಾಕಿಸ್ತಾನ, ಬಾಂಗ್ಲಾದೇಶ ಮತ್ತು ಅಫ್ಘಾನಿಸ್ತಾನದ ಮುಸ್ಲಿಮೇತರರಿಗೆ ಭಾರತೀಯ ಪೌರತ್ವ ನೀಡುವ ಪ್ರಕ್ರಿಯೆಯನ್ನು ಕೇಂದ್ರ ಗೃಹ ಇಲಾಖೆ ಪ್ರಾರಂಭಿಸಿದೆ.




ಈಗಾಗಲೇ ಮೊದಲ ಹಂತದಲ್ಲಿ ಅರ್ಜಿ ಸಲ್ಲಿಸಿದ 300ಕ್ಕೂ ಅಧಿಕ ಜನರಿಗೆ ಕೇಂದ್ರ ಸರ್ಕಾರ ಪೌರತ್ವ ಪ್ರಮಾಣ ಪತ್ರ ವಿತರಿಸಿದೆ. 14 ಜನರು ಕೇಂದ್ರ ಗೃಹ ಕಾರ್ಯದರ್ಶಿ ಅಜಯ್ ಭಲ್ಲಾ ಅವರಿಂದ ಬುಧವಾರ ಪ್ರಮಾಣ ಪತ್ರ ಪಡೆದಿದ್ದಾರೆ. ಇದರ ವಿರುದ್ಧ ಇಂಡಿಯನ್ ಯೂನಿಯನ್ ಮುಸ್ಲಿಂ ಲೀಗ್ (ಐಯುಎಂಎಲ್) ಪಕ್ಷ ಸುಪ್ರೀಂ ಕೋರ್ಟ್ ಮತ್ತು ಭಾರತೀಯ ಚುನಾವಣಾ ಆಯೋಗದ ಮೊರೆ ಹೋಗಲು ನಿರ್ಧರಿಸಿದೆ.

ದೇಶದಲ್ಲಿ ಲೋಕಸಭೆ ಚುನಾವಣೆಯ ನಡೆಯುತ್ತಿರುವ ಮಧ್ಯೆ ಕೇಂದ್ರ ಸರ್ಕಾರ ಪೌರತ್ವ ಪ್ರಮಾಣ ಪತ್ರಗಳನ್ನು ವಿತರಿಸುವುದು ಚುನಾವಣಾ ಮಾರ್ಗಸೂಚಿಗಳ ಉಲ್ಲಂಘನೆಯಾಗಲಿದೆ ಎಂದು ಐಯುಎಂಎಲ್ ಆರೋಪಿಸಿದೆ.

ನಾಲ್ಕು ವರ್ಷಗಳ ಮುಂಚೆ, 2019ರಲ್ಲಿ ಸಿಎಎ ಮಸೂದೆ ಅಂಗೀಕಾರಗೊಂಡರೂ ಕೇಂದ್ರ ಸರ್ಕಾರ ಚುನಾವಣೆಯ ಹೊಸ್ತಿಲಲ್ಲಿ ಈ ವರ್ಷದ ಮಾರ್ಚ್ ತಿಂಗಳಲ್ಲಿ ಕಾಯ್ದೆ ಕುರಿತು ಅಧಿಸೂಚನೆ ಹೊರಡಿಸಿತ್ತು. ಸಿಎಎ ಅಡಿ ಮುಸ್ಲಿಮರನ್ನು ಹೊರಗಿಟ್ಟು ಪೌರತ್ವ ನೀಡುವುದು ಸಂವಿಧಾನದ 14 ನೇ ಪರಿಚ್ಛೇದದ ಅಡಿಯಲ್ಲಿ ಸಮಾನತೆಯ ಹಕ್ಕಿಗೆ ವಿರುದ್ಧವಾಗಿದೆ ಎಂದು ವಾದಿಸಿರುವ ಐಯುಎಂಎಲ್, ಈಗಾಗಲೇ ಕಾಯ್ದೆಗೆ ತಡೆ ಕೋರಿ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದೆ.

ಸಿಎಎ ನಿಯಮಗಳು, 2019ರ ಅಡಿಯಲ್ಲಿ ಪೌರತ್ವ ಪ್ರಮಾಣ ಪತ್ರಗಳನ್ನು ನೀಡುವುದು ಸುಪ್ರೀಂ ಕೋರ್ಟ್‌ನಲ್ಲಿ ಕೇಂದ್ರ ಸರ್ಕಾರ ನೀಡಿರುವ ಭರವಸೆಯ ಸ್ಪಷ್ಟ ಉಲ್ಲಂಘನೆಯಾಗಿದೆ ಎಂದು ಐಯುಎಂಎಲ್ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಪಿಕೆ ಕುಂಜಾಲಿಕುಟ್ಟಿ ಗುರುವಾರ ಹೇಳಿದ್ದಾರೆ.

"ಮತದಾರರ ಮೇಲೆ ಪ್ರಭಾವ ಬೀರಲು ಕೇಂದ್ರ ಸರ್ಕಾರ ಸಿಎಎ ಅಡಿಯಲ್ಲಿ ಪೌರತ್ವ ಪ್ರಮಾಣ ಪತ್ರಗಳನ್ನು ವಿತರಿಸಲು ಪ್ರಾರಂಭಿಸಿದೆ. ಇದು ಚುನಾವಣಾ ಮಾರ್ಗಸೂಚಿಗಳ ಉಲ್ಲಂಘನೆಯಾಗಿದೆ. ಇದರ ವಿರುದ್ಧ ಚುನಾವಣಾ ಆಯೋಗ ಕ್ರಮ ಕೈಗೊಳ್ಳಬೇಕು ಎಂದು ಕುಂಜಾಲಿಕುಟ್ಟಿ ಒತ್ತಾಯಿಸಿದ್ದಾರೆ.


ಈ ವಿಷಯದ ಬಗ್ಗೆ ಕಾನೂನು ಅಭಿಪ್ರಾಯವನ್ನು ಪಡೆದುಕೊಳ್ಳಲು ಐಯುಎಂಎಲ್ ದೆಹಲಿಯ ಹಿರಿಯ ವಕೀಲರೊಂದಿಗೆ ಚರ್ಚೆಯನ್ನು ಪ್ರಾರಂಭಿಸಿದೆ.

"ಸಿಎಎ ವಿರುದ್ಧದ ನಮ್ಮ ಹೋರಾಟವನ್ನು ಮುಂದಿನ ಹಂತಕ್ಕೆ ಕೊಂಡೊಯ್ಯಲು ನಾವು ವಕೀಲರನ್ನು ಸಂಪರ್ಕಿಸಿದ್ದೇವೆ. ಈ ವಿಚಾರದಲ್ಲಿ ಪಕ್ಷವು ಸುಪ್ರೀಂ ಕೋರ್ಟ್ ಮತ್ತು ಚುನಾವಣಾ ಆಯೋಗವನ್ನು ಸಂಪರ್ಕಿಸಲಿದೆ" ಎಂದು ಐಯುಎಂಎಲ್ ರಾಜ್ಯ ಪ್ರಧಾನ ಕಾರ್ಯದರ್ಶಿ ಪಿಎಂಎ ಸಲಾಂ ಹೇಳಿದ್ದಾರೆ.

## ಮಮತಾ ಕುರಿತು ಆಕ್ಷೇಪಾರ್ಹ ಟೀಕೆ; ಬಿಜೆಪಿ ಅಭ್ಯರ್ಥಿ ಅಭಿಜಿತ್ ಗಂಗೋಪಾಧ್ಯಾಯ ವಿರುದ್ಧ ಚುನಾವಣಾ ಆಯೋಗಕ್ಕೆ ದೂರು

■ವಿಜಯಸಾಕ್ಷಿ ಸುದ್ದಿ, ಕಲ್ಕತ್ತಾ

ಸಾರ್ವಜನಿಕ ರ್‍ಯಾಲಿಯಲ್ಲಿ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ವಿರುದ್ಧ ಆಕ್ಷೇಪಾರ್ಹ ಟೀಕೆ ಮಾಡಿದ್ದಾರೆ ಎಂದು ಆರೋಪಿಸಿ ತಮ್ಲುಕ್ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಅಭಿಜಿತ್ ಗಂಗೋಪಾಧ್ಯಾಯ ವಿರುದ್ಧ ತೃಣಮೂಲ ಕಾಂಗ್ರೆಸ್ (ಟಿಎಂಸಿ) ಶುಕ್ರವಾರ ಚುನಾವಣಾ ಆಯೋಗಕ್ಕೆ



ದೂರು ನೀಡಿದೆ.

ಕಲ್ಕತ್ತಾ ಹೈಕೋರ್ಟ್‌ನ ಮಾಜಿ ನ್ಯಾಯಾಧೀಶ ಗಂಗೋಪಾಧ್ಯಾಯ ವಿರುದ್ಧವೂ ಪಕ್ಷ ಕಾನೂನು ಕ್ರಮ ಕೈಗೊಳ್ಳಲಿದೆ ಎಂದು ಟಿಎಂಸಿ ನಾಯಕ ಮತ್ತು ಪಶ್ಚಿಮ ಬಂಗಾಳ ಸಚಿವ ಶಶಿ ಪಂಜಾ ಹೇಳಿದ್ದಾರೆ.

ಪಶ್ಚಿಮ ಬಂಗಾಳದ ಮುಖ್ಯ ಚುನಾವಣಾ ಅಧಿಕಾರಿಗೆ ಬರೆದ ಪತ್ರದಲ್ಲಿ, ಟಿಎಂಸಿ ನಾಯಕ ಡೆ-ರೆಕ್ ಒ'ಬ್ರೇನ್, "ಈ ಭಾಷಣದಲ್ಲಿ, ಗಂಗೋಪಾಧ್ಯಾಯ ಅವರು ಕೆಲವು ಅತ್ಯಂತ ಆಕ್ಷೇಪಾರ್ಹ ಹೇಳಿಕೆಗಳನ್ನು ಮಾಡಿದ್ದಾರೆ' 'ಮಮತಾ ಬ್ಯಾನರ್ಜಿ, ನಿಮ್ಮನ್ನು ಎಷ್ಟು ಮಾರಾಟ ಮಾಡಲಾಗುತ್ತಿದೆ? ನಿಮ್ಮ ದರ 10 ಲಕ್ಷವಾಗಿದೆ, ಏಕೆಂದರೆ ನೀವು ಮಮತಾ ಬ್ಯಾನರ್ಜಿಯಿಂದ ಮೇಕಪ್ ಮಾಡುತ್ತಿದ್ದೀರಿ, ನಾನು ಕೆಲವೊಮ್ಮೆ ಆಶ್ಚರ್ಯ ಪಡುತ್ತೇನೆ' ಎಂದಿದ್ದಾರೆ. ಇದು ಬಿಜೆಪಿ ಅಭ್ಯರ್ಥಿಯ ಸ್ತ್ರೀದ್ವೇಷದ ನಡವಳಿಕೆಯನ್ನು ಸ್ಪಷ್ಟವಾಗಿ ತೋರಿಸುತ್ತದೆ.

### ಗದಗ ಸ್ಪೋರ್ಟ್ಸ್ ಶೂಟಿಂಗ್ ಅಕಾಡೆಮಿ ಶಾರ್ಪ್ ಶೂಟರ್‌ಗಳ ಸಾಧನೆ

# ಓಪನ್ ಶೂಟಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಬೆಸ್ಟ್ ಶಾಟ್ ಓಪನ್ ಶೂಟಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಗದಗ ಸ್ಪೋರ್ಟ್ಸ್ ಶೂಟಿಂಗ್ ಅಕಾಡೆಮಿಯ ವಿದ್ಯಾರ್ಥಿಗಳು ಸಾಧನೆ ಮೆರೆದಿದ್ದಾರೆ.



10 ಮೀ. ಏರ್ ರೈಫಲ್ ಸಬ್ ಯುಥ್ ವೈಯಕ್ತಿಕ ವಿಭಾಗದಲ್ಲಿ ಸಂಜನಾ ಚಿಕ್ಕನಗೌಡರ ಕಂಚಿನ ಪದಕ, ಟೀಮ್ ವಿಭಾಗದಲ್ಲಿ ಮನ್ವಿತಾ ಬಡ್ನಿ ಬಂಗಾರದ ಪದಕ, ಅಮೃತಾ ಕಬಾಡಿ ಬಂಗಾರದ ಪದಕ, ಸಂಜನಾ ಚಿಕ್ಕನಗೌಡರ ಬೆಳ್ಳಿ ಪದಕ, ವೈಯಕ್ತಿಕ ವಿಭಾಗದಲ್ಲಿ ತಹೀಮ್ ಗೋನಾಳ ಬೆಳ್ಳಿ ಪದಕ, ಬಾಲಕರ ಟೀಮ್ ಸಬ್‌ಯುಥ್ ವಿಭಾಗದಲ್ಲಿ ಆದೀಶ ಮೆಣಸಿನಕಾಯಿ ಬೆಳ್ಳಿ ಪದಕ, ಶ್ರೇಯಸ್ ಬಡಿಗೇರ ಬೆಳ್ಳಿ ಪದಕ, ತಹೀಮ್ ಗೋನಾಳ ಬೆಳ್ಳಿ ಪದಕ ಪಡೆದಿದ್ದಾರೆ.

10 ಮೀ. ಏರ್ ಪಿಸ್ತೂಲ್ ವೈಯಕ್ತಿಕ ವಿಭಾಗದಲ್ಲಿ ಸಿದ್ಧಾರ್ಥ ಎಂ. ಬಡ್ನಿ ಬಂಗಾರದ ಪದಕ, ರಿಯಾನ್ ಎಂ.ಹಮ್ಮೀದ ಬೆಳ್ಳಿ ಪದಕ ಪಡೆದಿದ್ದಾರೆ. ಸಬ್‌ಯುಥ್ ಟೀಮ್ ಪಿಸ್ತೂಲ್ ವಿಭಾಗದಲ್ಲಿ ಸಿದ್ಧಾರ್ಥ ಬಡ್ನಿ ಬಂಗಾರದ ಪದಕ, ಸುಶಾಂತ ಉಗಲಾಟ ಬಂಗಾರದ ಪದಕ, ರಿಯಾನ್ ಎಂ. ಹಮ್ಮೀದ ಬಂಗಾರದ ಪದಕವನ್ನು ಪಡೆದಿದ್ದಾರೆ. ಏರ್ ಪಿಸ್ತೂಲ್ ಸೀನಿಯರ್ ಟೀಮ್ ವಿಭಾಗದಲ್ಲಿ (ಕೋಚ್) ಬಸವರಾಜ ಹೊಂಬಾಳಿ, ವಿನಾಯಕ ಪವಾರ, ಹುಸೇನ ನದಾಫ ಬೆಳ್ಳಿ ಪದಕವನ್ನು ತಮ್ಮದಾಗಿಸಿಕೊಂಡಿದ್ದಾರೆ.

ತರಬೇತುದಾರರಾದ ಬಸವರಾಜ ಹೊಂಬಾಳಿ ವೈಯಕ್ತಿಕ ಸೀನಿಯರ್ ವಿಭಾಗದಲ್ಲಿ ಬೆಳ್ಳಿ ಪದಕವನ್ನು ಪಡೆದಿದ್ದಾರೆ. ಈ ಎಲ್ಲಾ ವಿದ್ಯಾರ್ಥಿಗಳಿಗೆ ಅಕಾಡೆಮಿಯ ಅಧ್ಯಕ್ಷರಾದ ಮುರುಘರಾಜೇಂದ್ರ ಎಂ.ಬಡ್ನಿ ಹಾಗೂ ಪ್ರತಿಭಾ ಬಡ್ನಿ, ಪಾಲಕರಾದ ನಿವೃತ್ತ ಸೈನಿಕ ವಿಜಯ ಬಡಿಗೇರ ಶೂಟರ್‌ಗಳಿಗೆ ಪದಕ ಹಾಗೂ ಪ್ರಶಸ್ತಿ ಪತ್ರಗಳನ್ನು ವಿತರಿಸಿ ಅಭಿನಂದಿಸಿದರು.

# ಪ್ರಕಾಶ್ ಹೊಸಮನಿಯವರಿಗೆ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಸ್ನಾತಕೋತ್ತರ ಅಧ್ಯಯನ ಕೇಂದ್ರ, ಗದಗ-ಬೆಟಗೇರಿಗೆ ಧಾರವಾಡದ ಪ್ರಾದೇಶಿಕ ಕಾಲೇಜು ಉನ್ನತ ಶಿಕ್ಷಣ ಇಲಾಖೆಯ ಜಂಟಿ ನಿರ್ದೇಶಕ ಪ್ರೊ. ಪ್ರಕಾಶ ಹೊಸಮನಿ ಭೇಟಿ ನೀಡಿ, ಶೈಕ್ಷಣಿಕ ಪ್ರಗತಿ ಪರಿಶೀಲನೆ ಸಭೆ ನಡೆಸಿದರು.




ಕಾಲೇಜಿನ ಪ್ರಾಚಾರ್ಯ ಡಾ. ಎಸ್.ಎಫ್. ಶಿದ್ನೇಕೊಪ್ಪ, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ಅತಿಥಿ ಉಪನ್ಯಾಸಕರ ಪರವಾಗಿ ಸನ್ಮಾನಿಸಿ ಗೌರವಿಸಲಾಯಿತು.


ಈ ಸಂದರ್ಭದಲ್ಲಿ ರಾಜ್ಯ ಸರ್ಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಂಘದ ರಾಜ್ಯಾಧ್ಯಕ್ಷ ಡಾ.ಹನುಮಂತಗೌಡ ಆರ್. ಕಲ್ಮನಿ, ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

# 'ದಶರಥ ನಂದನ ಶ್ರೀರಾಮ' ನಾಟಕ ಪ್ರದರ್ಶನ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಹಿರಿಯ ರಂಗಕರ್ಮಿ ಫಣೀಂದ್ರಾಚಾರ್ಯ ದ್ಯಾಮೇನಹಳ್ಳಿ ಅವರ ಭಕ್ತಿರಸ ಉಕ್ಕಿಸುವ ಸಂಭಾಷಣೆ,ಗಟ್ಟಿ ನಿರ್ದೇಶನ ಮತ್ತು ಇಂಪಾದ ಹಾಡುಗಳೊಂದಿಗೆ ಪ್ರಯೋಗಗೊಂಡು ಜನಮನ ಸೂರೆಗೊಂಡ ಗದಗ ಕಲಾವಿದರ 'ದಶರಥ ನಂದನ ಶ್ರೀರಾಮ' ನಾಟಕ ಧಾರವಾಡ ಜಿಲ್ಲೆಯ ನವಲಗುಂದ ಪಟ್ಟಣದಲ್ಲಿ ಶ್ರೀ ಶಂಕರಾಚಾರ್ಯ ಸೇವಾ ಸಮೀತಿಯವರ ಆಶ್ರಯದಲ್ಲಿ ಪ್ರಯೋಗಗೊಳ್ಳಲಿದೆ.

ಆದಿಗುರು ಶಂಕರಾಚಾರ್ಯರ ಉತ್ಸವದ ಅಂಗವಾಗಿ ಮೇ 18ರ ಸಂಜೆ 6 ಗಂಟೆಗೆ ಪ್ರಯೋಗಗೊಳ್ಳುವ ಈ ನಾಟಕ(ಸಂಗೀತ ರೂಪಕ)ದಲ್ಲಿ ರಂಗಕಲಾವಿದರಾದ ಮೌನೇಶ್ ಸಿ. ಬಡಿಗೇರ್(ನರೇಗಲ್ಲ)-ಶ್ರೀರಾಮನಾಗಿ,



ಲಕ್ಷ್ಮಣ-ಉಜ್ವಲ್ ಕಬಾಡಿ, ಭರತ-ಶ್ವೇತಾ ಸುರೇಬಾನ, ಸೀತೆ- ಕೀರ್ತಿ ಗುಮಾಸ್ತೆ, ದಶರಥ- ಅಂದಾನಪ್ಪ ವಿಭೂತಿ, ವಿಶ್ವಾಮಿತ್ರ-ಮುರಲೀಧರ ಸಂಕನೂರ, ಕೈಕೇಯಿ- ಅನ್ವಿತಾ ಹುಯಿಲಗೋಳ, ಮಂಥರೆ-ರಕ್ಷಿತಾ ಕುಲಕರ್ಣಿ, ಅಹಲ್ಯೆ-ರಂಜಿತಾ ಕುಲಕರ್ಣಿ, ಶೂರ್ಪನಖಿ- ಅನಘಾ ಕುಲಕರ್ಣಿ, ರಾವಣ-ವಿಶ್ವನಾಥ್ ಬೇಂದ್ರೆ, ಶಬರಿ-ಸುರಭಿ ಮಹಾಶಬ್ದಿ, ವೇದವತಿ-ರಂಜಿತಾ ಕುಲಕರ್ಣಿ, ಅಗ್ನಿದೇವ-ಶ್ವೇತಾ ಸುರೇಬಾನ, ವಿಭೀಷಣ- ಅಮರೇಶ ರಾಮ್ ಪುರ, ಮಾರೀಚ-ಅನನ್ಯ ದೇಶಪಾಂಡೆ, ಬಾಲರಾಮ-ದೇವಾಂಸ್, ಬಾಲ ಲಕ್ಷ್ಮಣ-ಪ್ರಭು ಗೌಡ, ಲವ ಕುಶ- ಆರಾಧ್ಯ, ಅನನ್ಯಾ, ಹನುಮಂತ-ಅವನಿ ಕುಲಕರ್ಣಿ ಅಭಿನಯಿಸಲಿದ್ದಾರೆ. ರಂಗಾಸಕ್ತರು ವೀಕ್ಷಿಸಲು ಶಂಕರಾಚಾರ್ಯ ಸೇವಾ ಸಮೀತಿಯವರು ವಿನಂತಿಸಿದ್ದಾರೆ.

## ಎವರೆಸ್ಟ್, ಎಂಡಿಹೆಚ್ ಮಸಾಲೆ ಪದಾರ್ಥಗಳನ್ನು ನಿಷೇಧಿಸಿದ ನೇಪಾಳ

■ವಿಜಯಸಾಕ್ಷಿ ಸುದ್ದಿ, ನೇಪಾಳ




ನೇಪಾಳದ ಆಹಾರ ತಂತ್ರಜ್ಞಾನ ಮತ್ತು ಗುಣಮಟ್ಟ ನಿಯಂತ್ರಣ ಇಲಾಖೆಯು ಎರಡು ಭಾರತೀಯ ಮಸಾಲೆ ಬ್ರಾಂಡ್‌ಗಳಾದ ಎವರೆಸ್ಟ್ ಮತ್ತು ಎಂಡಿಎಂಹೆಚ್‌ಗಳ ಆಮದು, ಬಳಕೆ ಮತ್ತು ಮಾರಾಟವನ್ನು ನಿಷೇಧಿಸಿದೆ. ಅಲ್ಲದೆ ಈ ಮಸಾಲೆಗಳಲ್ಲಿನ ಎಥಿಲೀನ್ ಆಕ್ಸೈಡ್ ಮಟ್ಟವನ್ನು ಪರೀಕ್ಷಿಸಲು ಪ್ರಾರಂಭಿಸಿದೆ ಎಂದು ವರದಿಯಾಗಿದೆ.

ಉತ್ಪನ್ನಗಳಲ್ಲಿ ಹೆಚ್ಚಿನ ಮಟ್ಟದ ಎಥಿಲೀನ್ ಆಕ್ಸೈಡ್ ಕುರುಹುಗಳ ಬಗ್ಗೆ ಸುದ್ದಿಯಾದ ನಂತರ ನೇಪಾಳ ಈ ಎರಡು ಮಸಾಲೆ ಬ್ರಾಂಡ್‌ಗಳನ್ನು ನಿಷೇಧಿಸಿದೆ.

ಎವರೆಸ್ಟ್ ಮತ್ತು ಎಂಡಿಹೆಚ್ ಬ್ರಾಂಡ್ ಮಸಾಲೆಗಳಲ್ಲಿ ಹಾನಿಕಾರಕ ರಾಸಾಯನಿಕಗಳ ಕುರುಹುಗಳ ಬಗ್ಗೆ ಸುದ್ದಿ ಬಂದ ನಂತರ ಒಂದು ವಾರದ ಹಿಂದೆ ಅವುಗಳ ಆಮದು ಮತ್ತು ಮಾರಾಟವನ್ನು ನಿಷೇಧಿಸಿದ್ದೇವೆ ಎಂದು ನೇಪಾಳದ ಆಹಾರ ತಂತ್ರಜ್ಞಾನ ಮತ್ತು ಗುಣಮಟ್ಟ ನಿಯಂತ್ರಣ ಇಲಾಖೆಯ ವಕ್ತಾರ ಮೋಹನ್ ಕೃಷ್ಣ ಮಹಾರ್ಜನ್ ಅವರು ಎಎನ್‌ಐಗೆ ದೂರವಾಣಿಯಲ್ಲಿ ಹೇಳಿದ್ದಾಗಿ ವರದಿಯಾಗಿದೆ.

ಈ ಎರಡು ನಿರ್ದಿಷ್ಟ ಬ್ರಾಂಡ್‌ಗಳ ಮಸಾಲೆಗಳ ರಾಸಾಯನಿಕಗಳ ಪರೀಕ್ಷೆಗಳು ನಡೆಯುತ್ತಿವೆ. ಅಂತಿಮ ವರದಿ ಬರುವವರೆಗೆ ನಿಷೇಧವು ಜಾರಿಯಲ್ಲಿರುತ್ತದೆ. ಹಾಂಗ್ ಕಾಂಗ್ ಮತ್ತು ಸಿಂಗಾಪುರವು ಈಗಾಗಲೇ ಈ ಮಸಾಲೆಗಳನ್ನು ನಿಷೇಧಿಸಿವೆ" ಎಂದು ಮಹಾರ್ಜನ್ ಹೇಳಿದ್ದಾರೆ.

ಎಥಿಲೀನ್ ಆಕ್ಸೈಡ್ ಬಳಕೆಯನ್ನು ವಿವಿಧ ದೇಶಗಳಲ್ಲಿ ಶೇಕಡಾ 0.73 ರಿಂದ ಶೇಕಡಾ 7 ರವರೆಗೆ ಅನುಮತಿಸಲಾಗಿದೆ ಎಂದು ಭಾರತ ಸರ್ಕಾರದ ಮೂಲಗಳನ್ನು ಉಲ್ಲೇಖಿಸಿ ಎಎನ್‌ಐ ಹೇಳಿದೆ.

ಎವರೆಸ್ಟ್ ಮತ್ತು ಎಂಡಿಹೆಚ್ ಮಸಾಲೆಗಳನ್ನು ನ್ಯೂಜಿಲೆಂಡ್, ಅಮೆರಿಕ, ಆಸ್ಟ್ರೇಲಿಯಾ ದೇಶಗಳಲ್ಲಿಯೂ ಪರಿಶೀಲನೆಗೆ ಒಳಪಡಿಸಲಾಗುತ್ತಿದೆ. ಮಧ್ಯ ಪೂರ್ವ ದೇಶಗಳು ಸೇರಿ ಹಲವು ದೇಶಗಳಿಗೆ ಭಾರತ ಮೂಲದ ಎಂಡಿಹೆಚ್ ಹಾಗೂ ಎವರೆಸ್ಟ್ ಪದಾರ್ಥಗಳನ್ನು ರಫ್ತು ಮಾಡಲಾಗುತ್ತಿದೆ. ಕಳೆದ ಏಪ್ರಿಲ್‌ನಲ್ಲಿ ಹಾಂಕಾಂಗ್ ಹಾಗೂ ಸಿಂಗಾಪುರ ದೇಶಗಳು ಈ ಉತ್ಪನ್ನಗಳನ್ನು ನಿಷೇಧಿಸಿದ್ದವು.

## ಕಸಾಯಿಖಾನೆ, ಮಾಂಸ ಮಾರಾಟ ಬಂದ್

■ವಿಜಯಸಾಕ್ಷಿ ಸುದ್ದಿ, ಗದಗ

ಬುದ್ಧ ಪೂರ್ಣಿಮಾ ಅಂಗವಾಗಿ ಮೇ 23ರಂದು ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯ ಕಸಾಯಿಖಾನೆಗಳಲ್ಲಿ ಪ್ರಾಣಿವಧೆ ಹಾಗೂ ಮಾಂಸ ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ. ಕಾರಣ ಮಾಂಸ ಮಾರಾಟ ಮಾಡುವದಾಗಲಿ ಹಾಗೂ ಜಾನುವಾರುಗಳನ್ನು ವಧೆ ಮಾಡದಿರಲು ಸೂಚಿಸ ಲಾಗಿದೆ. ಈ ಆದೇಶವನ್ನು ಉಲ್ಲಂಘಿಸಿದಲ್ಲಿ ಅಂಥವರ ಲೈಸನ್ಸನ್ನು ರದ್ದು ಮಾಡಲಾಗುವುದು ಎಂದು ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ತಮಿಳುನಾಡಿನ ಏಶಿಯಾ ಇಂಟರ್‌ನ್ಯಾಶನಲ್ ಕಲ್ಚರ್ ಅಕಾಡೆಮಿಯ ಗೌರವ ಡಾಕ್ಟರೇಟ್ ಪ್ರಶಸ್ತಿಗೆ ಭಾಜನರಾದ ಸಾಮಾಜಿಕ ಕಾರ್ಯಕರ್ತರು ಹಾಗೂ ಕನ್ನಡ ಸಂಘಟಕರಾದ ಡಾ. ಎಸ್.ಎಸ್. ರಡ್ಡೇರ ದಂಪತಿಗಳಿಗೆ ವಿಶ್ವ ಮಾನವ ಹಕ್ಕುಗಳ ರಕ್ಷಣಾ ಆಯೋಗದ ಉತ್ತರ ಕರ್ನಾಟಕ ಸಂಚಾಲಕರು, ನವ ಕರ್ನಾಟಕ ಜನಪರ ಅಭಿವೃದ್ಧಿ ವೇದಿಕೆಯ ರೈತ ಘಟಕದ ರಾಜ್ಯಾಧ್ಯಕ್ಷ ಶಿವಾನಂದ ಪಲ್ಲೇದ ಹಾಗೂ ಕಾರ್ಮಿಕ ಘಟಕದ ರಾಜ್ಯಾಧ್ಯಕ್ಷ ಡಾ. ಶಿವಾನಂದ ಹಿರೇಮಠ ದಂಪತಿಗಳು ಸನ್ಮಾನಿಸಿ, ಗೌರವಿಸಿದರು.

## ಮಾಜಿ ಶಾಸಕ ಇದಿನಬ್ಬ ಮೊಮ್ಮಗನಿಗೆ ದೆಹಲಿ ಹೈಕೋರ್ಟ್ ಜಾಮೀನು

■ವಿಜಯಸಾಕ್ಷಿ ಸುದ್ದಿ, ನವದೆಹಲಿ



ಉಗ್ರ ಸಂಘಟನೆ ಐಸಿಸ್ ಜೊತೆ ನಂಟು ಹೊಂದಿರುವ ಆರೋಪದ ಮೇಲೆ ಕಳೆದ ಮೂರು ವರ್ಷಗಳ ಹಿಂದೆ ರಾಷ್ಟ್ರೀಯ ತನಿಖಾ ದಳ (ಎನ್‌ಐಎ)ದಿಂದ ಬಂಧಿಸಲ್ಪಟ್ಟಿದ್ದ ಉಳ್ಳಾಲದ ಮಾಜಿ ಶಾಸಕ ದಿವಂಗತ ಇದಿನಬ್ಬ ಅವರ ಮೊಮ್ಮಗ ಅಮ್ಮಾರ್ ಅಬ್ದುಲ್ ರೆಹಮಾನ್‌ಗೆ ದೆಹಲಿ ಹೈಕೋರ್ಟ್ ಜಾಮೀನು ಮಂಜೂರು ಮಾಡಿದೆ.

ಒಬ್ಬರು ವ್ಯಕ್ತಿಯ ಮೊಬೈಲ್‌ನಲ್ಲಿ ಐಸಿಸ್ ಧ್ವಜ ಮತ್ತು ಕರಪತ್ರಗಳು ಇದ್ದ ಮಾತ್ರಕ್ಕೆ ಅವರನ್ನು ಭಯೋತ್ಪಾದಕ ಎನ್ನಲಾಗದು ಎಂದು ನ್ಯಾಯಾಲಯ ಹೇಳಿರುವುದಾಗಿ ವರದಿಯಾಗಿದೆ.

ಆಗಸ್ಟ್ 21,2021 ರಂದು ಯುಎಪಿಎ ಕಾಯ್ದೆಯಡಿಯಲ್ಲಿ ಎನ್‌ಐಎ ಅಮ್ಮಾರ್ ಅವರನ್ನು ದಕ್ಷಿಣ ಕನ್ನಡ ಜಿಲ್ಲೆಯ ಉಳ್ಳಾಲದ ಮನೆಯಿಂದ ಬಂಧಿಸಿತ್ತು. ತನ್ನ ಬಂಧನ ಪ್ರಶ್ನಿಸಿ ವಿಚಾರಣಾಧೀನ ಕೋರ್ಟ್‌ನಲ್ಲಿ ಅಮ್ಮಾರ್ ಅಬ್ದುಲ್ ರೆಹಮಾನ್ ಜಾಮೀನಿಗೆ ಅರ್ಜಿ ಸಲ್ಲಿಸಿದ್ದರು. ಆದರೆ, ಜಾಮೀನು ನಿರಾಕರಿಸಿದ ಹಿನ್ನೆಲೆ ದೆಹಲಿ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು. ಸುದೀರ್ಘ ವಿಚಾರಣೆಯ ನಂತರ ಹೈಕೋರ್ಟ್ ಜಾಮೀನು ನೀಡಿದೆ.

"ಕೇವಲ ಭಯೋತ್ಪಾದಕ ಸಂಘಟನೆಯತ್ತ ಆಕರ್ಷಣೆ ಭಯೋತ್ಪಾದನೆಯಾಗುವುದಿಲ್ಲ. ಐಸಿಸ್ ಪರ ಭಾಷಣಗಳನ್ನು ಕೇಳುವುದು ಯುಎಪಿಎ ಕಾಯ್ದೆಯ ಸೆಕ್ಷನ್ 38 ಮತ್ತು 39ರ ಅಡಿಯಲ್ಲಿ ಬರುವುದಿಲ್ಲ. ಐಸಿಸ್ ಧ್ವಜಗಳು ಮತ್ತು ಲಾಡೆನ್ ಭಾಷಣಗಳ ಭಾಗಗಳು ಅಮ್ಮಾರ್ ಅವರ ಮೊಬೈಲ್‌ನಲ್ಲಿ ಕಂಡು ಬಂದಿದ್ದರೂ, ಅಂತಹ ವಿಷಯಗಳು ಆನ್‌ಲೈನ್‌ನಲ್ಲಿ ಸುಲಭವಾಗಿ ಲಭ್ಯವಿರುವುದರಿಂದ ಇದು ಅವರನ್ನು ಐಸಿಸ್ ಸದಸ್ಯರನ್ನಾಗಿ ಮಾಡುವುದಿಲ್ಲ" ಎಂದು ನ್ಯಾಯಾಲಯ ಹೇಳಿದೆ.

### ಬರ ಪರಿಸ್ಥಿತಿ, ಕುಡಿಯುವ ನೀರು ಪೂರೈಕೆ ಕುರಿತ ಸಭೆಯಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು

# ನೀರಿನ ಸಮಸ್ಯೆಯಾಗದಂತೆ ಕ್ರಮವಹಿಸಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲೆಯಲ್ಲಿ ಮಳೆಯಾಗುತ್ತಿದ್ದರೂ ಸಹ ಯಾವುದೇ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಎಲ್ಲ ತಹಸೀಲ್ದಾರರು ನಿಗಾ ವಹಿಸಿ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದರು.

ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಬರ ಪರಿಸ್ಥಿತಿ, ಕುಡಿಯುವ ನೀರು, ಮೇವು ಹಾಗೂ ಬರ ಪರಿಹಾರ ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ, ಸದ್ಯ 52 ಗ್ರಾಮಗಳಲ್ಲಿ 81 ಖಾಸಗಿ ಒಡೆತನದ ಕೊಳವೆ ಬಾವಿಗಳಿಂದ ಕುಡಿಯುವ ನೀರನ್ನು ಸರಬರಾಜು ಮಾಡಲಾಗುತ್ತಿದೆ. ಧಾರವಾಡದಲ್ಲಿ 18 ಗ್ರಾಮಗಳಿಗೆ 26 ಕೊಳವೆ ಬಾವಿಗಳಿಂದ ಹಾಗೂ ಹುಬ್ಬಳ್ಳಿಯಲ್ಲಿ 5 ಗ್ರಾಮಗಳಿಗೆ 5 ಕೊಳವೆಬಾವಿಗಳಿಂದ ನೀರು ಪೂರೈಸಲಾಗುತ್ತಿದೆ. ಯಾವುದೇ ಗ್ರಾಮದಲ್ಲಿಯೂ ನೀರಿನ ಸಮಸ್ಯೆಯಾಗದಂತೆ ತಹಸೀಲ್ದಾರರು ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲೆಯಲ್ಲಿ ಮಳೆಯಾಗುತ್ತಿರುವುದರಿಂದ ಎಲ್ಲಿಯಾದರೂ ಜಾನುವಾರು ಅಥವಾ ಮಳೆ ಹಾನಿಯಾದಲ್ಲಿ ತಹಸೀಲ್ದಾರರು ಖುದ್ದಾಗಿ ಭೇಟಿ ನೀಡಿ, ಪರಿಶೀಲಿಸಿ, ತಕ್ಷಣವೇ ಪರಿಹಾರ ನೀಡುವಂತೆ ಸೂಚಿಸಿದರು. ಕುಂದಗೋಳ ತಾಲೂಕಿನ ಯರಗುಪ್ಪಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮುಳ್ಳೊಳ್ಳಿ ಗ್ರಾಮದ ನೀರಿನ ಟ್ಯಾಂಕ್ ಶಿಥಿಲಾವಸ್ಥೆಯಲ್ಲಿದ್ದು, ಅಪಾಯವಿರುವುದರಿಂದ ತಹಸೀಲ್ದಾರರು ತಕ್ಷಣ ಪರಿಶೀಲಿಸುವಂತೆ ತಿಳಿಸಿದರು. ಅಲ್ಲದೇ ಧಾರವಾಡ ತಾಲೂಕಿನ ಹೆಬ್ಬಳ್ಳಿ ಗ್ರಾಮದ ನೀರಿನ ಟ್ಯಾಂಕ್‌ಗೆ ಸಮರ್ಪಕವಾಗಿ ನೀರು ಪೂರೈಕೆಯಾಗದ ಕುರಿತು ಅಹವಾಲು ಕೇಳಿಬಂದಿದ್ದು, ಧಾರವಾಡ ತಹಸೀಲ್ದಾರ ತಕ್ಷಣವೇ ಭೇಟಿ ನೀಡಿ ಪರಿಶೀಲಿಸುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು.



ಜಿಲ್ಲೆಯಲ್ಲಿ ಮೇವಿನ ಸಮಸ್ಯೆಯಿಲ್ಲ. ಈಗಾಗಲೇ 62,463 ಮೆಟ್ರಿಕ್ ಟನ್ ಮೇವು ಸಂಗ್ರಹವಿದ್ದು ರೈತರಿಗಾಗಿ ಮೇವು ಬ್ಯಾಂಕ್ ತೆರೆಯಲಾಗಿದೆ ಎಂದರು. ಮಲಪ್ರಭಾ ಬಲದಂಡೆ ಕಾಲುವೆಯಿಂದ ನವಲಗುಂದ, ಅಣ್ಣಿಗೇರಿ, ಹುಬ್ಬಳ್ಳಿ ಹಾಗೂ ಕುಂದಗೋಳದ 58 ಕೆರೆಗಳಿಗೆ ನೀರು ಸರಬರಾಜು ಆಗುತ್ತಿದ್ದು, ಬಹುತೇಕ ಕಡೆ ಕೆರೆಗಳು ಭರ್ತಿಯಾಗುತ್ತಿವೆ. ಈ ಬಗ್ಗೆ ತಹಸೀಲ್ದಾರರು ಭೇಟಿ ನೀಡಿ ಪರಿಶೀಲಿಸಬೇಕು. ನೀರು ಎಲ್ಲಿಯೂ ಪೋಲಾಗದಂತೆ ಕಟ್ಟುನಿಟ್ಟಿನ ಕ್ರಮ, ನಿಗಾ ವಹಿಸಬೇಕೆಂದರು. ಮೇ 23ಕ್ಕೆ ನೀರು ಸರಬರಾಜು ಸ್ಥಗಿತಗೊಂಡು ಮುಂದೆ ಗದಗ ಜಿಲ್ಲೆಗೆ ಪೂರೈಸಲಾಗುತ್ತಿದೆ. ನಗರ ಪ್ರದೇಶಗಳಲ್ಲಿಯೂ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನಿಗಾ ವಹಿಸಬೇಕೆಂದು ನಗರ ನೀರು ಸರಬರಾಜು ಮಂಡಳಿ ಮುಖ್ಯ ಇಂಜಿನಿಯರರಿಗೆ ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲೆಗೆ ಈಗಾಗಲೇ ಒಟ್ಟು 108.12 ಕೋಟಿ ರೂ ಬರ ಪರಿಹಾರ ಅನುದಾನ ಬಿಡುಗಡೆ-ಯಾಗಿದೆ. ವಿವಿಧ ತಾಂತ್ರಿಕ ಕಾರಣಗಳಿಂದ ಎಲ್ಲ ರೈತರ ಬ್ಯಾಂಕ್ ಖಾತೆಗೆ ಪರಿಹಾರ ಹಣ ಜಮೆ ಆಗದಿರುವ ಬಗ್ಗೆ ತಹಸೀಲ್ದಾರರು ತಕ್ಷಣವೇ ಸರಿಪಡಿಸಲು ಕ್ರಮ ಕೈಗೊಳ್ಳಬೇಕು. ಫ್ರುಟ್ಸ್‌ಐಡಿ, ಆಧಾರ್ ಲಿಂಕ್, ಡಿಲಿಶನ್ ಪ್ರಕರಣ, ಮಿಸ್‌ಮ್ಯಾಚ್ ಪ್ರಕರಣ, ಶಿಫ್ಟೆಡ್ ಪ್ರಕರಣ, ನಾಟ್ ಟ್ರೇಸಿಯೇಬಲ್ ಪ್ರಕರಣ, ಡೆತ್ ಪ್ರಕರಣಗಳಲ್ಲಿಯೂ ನ್ಯೂನತೆಗಳನ್ನು ತಹಸೀಲ್ದಾರರು ಆದ್ಯತೆ ಮೇರೆಗೆ ಸರಿಪಡಿಸಿಕೊಳ್ಳಬೇಕು. ಎಲ್ಲ ಗ್ರಾಮ ಆಡಳಿತ ಅಧಿಕಾರಿಗಳು ಗ್ರಾಮಲೆಕ್ಕಾಧಿಕಾರಿಗಳಿಂದ ತ್ವರಿತಗತಿಯಲ್ಲಿ ಬರ ಪರಿಹಾರ ಕಾರ್ಯ ಸರಿಪಡಿಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಉಪವಿಭಾಗಾಧಿಕಾರಿ ಶಾಲಂ ಹುಸೇನ, ಕೃಷಿ ಜಂಟಿ ನಿರ್ದೇಶಕ ಕಿರಣಕುಮಾರ ಎಂ. ಸೇರಿದಂತೆ ಎಲ್ಲ ತಾಲೂಕುಗಳ ತಹಸೀಲ್ದಾರರು ಉಪಸ್ಥಿತರಿದ್ದರು.

## ಜಿಲ್ಲಾ ಕಾರ್ಯಪಡೆ ಸದಸ್ಯರಿಗೆ ಆನ್‌ಲೈನ್ ತರಬೇತಿ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಅಯೋಗದಿಂದ ಗುರುವಾರ ಜಿಲ್ಲಾಡಳಿತ ಭವನದಲ್ಲಿ ಬಾಲ ಹಾಗೂ ಕಿಶೋರ ಕಾರ್ಮಿಕ ಕಾಯ್ದೆ 1986ರ ಕುರಿತು ಜಿಲ್ಲಾ ಕಾರ್ಯಪಡೆ ಸದಸ್ಯರಿಗೆ ಆನ್‌ಲೈನ್ ತರಬೇತಿ ಕೈಗೊಳ್ಳಲಾಯಿತು.

ಬಾಲಕಾರ್ಮಿಕರ ವಿಭಾಗಗಳಾದ ಮಕ್ಕಳ, ಹದಿಹರೆಯದ, ಬಂಧಿತ ಕಾರ್ಮಿಕರನ್ನು ಹೇಗೆ ಪರಿಗಣಿಸಬೇಕು, 1986ರ ಸಿಎಎಲ್ ಪಿಆರ್ ಕಾಯಿದೆ ಅಡಿಯಲ್ಲಿ ಬರುವ ಬಾಲ ಕಾರ್ಮಿಕ ಸಾಂವಿಧಾನಿಕ ನಿಬಂಧನೆಗಳು ಮತ್ತು ಬಾಲ ಕಾರ್ಮಿಕರ ಕಾನೂನುಗಳ ಬಗ್ಗೆ, ಸಿಎಎಲ್ ಪಿಆರ್ ಕಾಯಿದೆಯ ಪ್ರಮುಖ ವಿಭಾಗಗಳು, ದಂಡಗಳು ಸೇರಿದಂತೆ ಬಾಲ ಕಾರ್ಮಿಕರ ವಿರುದ್ಧ ಪರಿಹಾರ, ಮಧ್ಯಸ್ಥಗಾರರ ನಿಯಮಗಳು ಮತ್ತು ಜವಾಬ್ದಾರಿಗಳು ಹಾಗೂ ಜಿಲ್ಲಾ ಕಾರ್ಯಪಡೆಯ ನಿಯಮಗಳು ಮತ್ತು ಜವಾಬ್ದಾರಿಗಳ ಕುರಿತು ತರಬೇತಿಯಲ್ಲಿ ತಿಳಿಸಲಾಯಿತು.

ತರಬೇತಿಯಲ್ಲಿ ಜಿಲ್ಲಾ ಆ್ಯಟಿ-ಟ್ರಾಫಿಕಿಂಗ್ ಇಲಾಖೆಯ ಹಿರಿಯ ಕಲ್ಯಾಣ ಪೊಲೀಸ್ ಅಧಿಕಾರಿ ಜಾಕಿರ್‌ಹುಸೇನ್ ಇನಾಮದಾರ, ಜಿಲ್ಲಾ ಕಾರ್ಮಿಕ ಇಲಾಖೆ ಅಧಿಕಾರಿ ಬಿ.ಆರ್. ಜಾಧವ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ರಮೇಶ ಕಳ್ಳಿಮನಿ, ಪೃಥ್ವಿಪ್ರಿಯಾ ಎನ್‌ಜಿಒ ಪ್ರತಿನಿಧಿ ರಮೇಶ ಕೋಳೂರ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಕಾರ್ಯಪಡೆಯ ಸದಸ್ಯರು ಹಾಜರಿದ್ದರು.

## ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯ ಉತ್ತಮವಾಗಿರಲಿ



■ ವಿಜಯಸಾಕ್ಷಿ ಸುದ್ದಿ, ಡಂಬಳ

ಮಕ್ಕಳ ಬದುಕು ಸುಂದರವಾಗಿರಲು ಮತ್ತು ಅವರ ಮುಂದಿನ ಶೈಕ್ಷಣಿಕ ಭವಿಷ್ಯ ಉತ್ತಮವಾಗಿರಬೇಕೆನ್ನುವ ಹಿನ್ನೆಲೆಯಲ್ಲಿ ಶಿಕ್ಷಣ ಕಲಿಕೆಯ ಜೊತೆಗೆ ನಮ್ಮ ಸುತ್ತಮುತ್ತಲಿನ ಪರಿಸರ ಮತ್ತು ವೈಜ್ಞಾನಿಕ ಕಲಿಕೆಯ ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಿಆರ್‌ಪಿ ಮೃತ್ಯುಂಜಯ ಪೂಜಾರ ಹೇಳಿದರು.

ಡಂಬಳ ಗ್ರಾಮದ ಸರಕಾರಿ ಹೆಣ್ಣುಮಕ್ಕಳ ಶಾಲಾ ವಿದ್ಯಾರ್ಥಿನಿಯರಿಗೆ ಬರಗಾಲದ ಮಧ್ಯಾಹ್ನದ ಊಟ ಕಾರ್ಯಕ್ರಮದಡಿ ಸ್ಥಳೀಯ ಐತಿಹಾಸಿಕ ಸ್ಥಳಗಳಾದ ದೊಡ್ಡಬಸವೇಶ್ವರ, ಜಪದ ಬಾವಿ, ಸೋಮೇಶ್ವರ ದೇವಾಲಯಗಳಿಗೆ ವಿದ್ಯಾರ್ಥಿಗಳ ಪ್ರವಾಸದ ಸಂದರ್ಭದಲ್ಲಿ ಮಾತನಾಡಿದ ಅವರು, ಮೊಬೈಲ್ ಬಳಕೆ ಓದಿನ ಮೇಲೆ ದುಷ್ಪರಿಣಾಮ ಬೀರುತ್ತಿರುವುದರಿಂದ ಪಾಲಕರು ತಮ್ಮ ಮಕ್ಕಳನ್ನು ಮೊಬೈಲ್‌ನಿಂದ ದೂರವಿಡಿ. ಅಡುಗೆ ಮಾಡುವಾಗ ವ್ಯತ್ಯಾಸವಾದರೆ ಅಂದಿನ ಅಡುಗೆ ಕೆಟ್ಟುಹೋಗಬಹುದು. ಬೆಳೆ ಹಾಳಾದರೆ ರೈತ ಒಂದು ವರ್ಷ ಹಾನಿಯನ್ನು ಅನುಭವಿಸಬಹುದು. ಆದರೆ ವಿದ್ಯಾರ್ಥಿಗಳು ತಪ್ಪು ಮಾರ್ಗ ತುಳಿದರೆ ಅವರ ಭವಿಷ್ಯ ಹಾಳಾಗುತ್ತದೆ. ಆ ಹಿನ್ನೆಲೆಯಲ್ಲಿ ಶೈಕ್ಷಣಿಕ ಶಕ್ತಿ ಹೆಚ್ಚಿಸಲು ಪಾಲಕರು ಹೆಚ್ಚು ಗಮನ ಹರಿಸಬೇಕು. ಗುರುಗಳ ಮಾರ್ಗದರ್ಶನದಲ್ಲಿ ನಡೆದಾಗ ಮಾತ್ರ ಉತ್ತಮ ಗುರಿ ತಲುಪಲು ಸಾಧ್ಯ ಎಂದು ಹೇಳಿದರು.

ಮುಖ್ಯೋಪಾಧ್ಯಾಯ ಬಿ.ಜೆ. ಪಾಟೀಲ, ಹಿರಿಯ ಶಿಕ್ಷಕ ಯು. ಆರ್. ಗಡ್ಡಿ ಮಾತನಾಡಿದರು. ಈ ಸಂದರ್ಭದಲ್ಲಿ ಶಿಕ್ಷಕರಾದ ಪಿ.ಎಚ್. ರೋಣದ, ಎಮ್.ಎಸ್. ಉಮಾಲೋಟಿ, ಟಿ.ಸಿ. ಮ್ಯಾಗಿ, ಎಲ್. ಎನ್. ಸಣ್ಣಯರಾಶಿ, ಎಸ್.ಎಸ್. ಸೊರಟೂರ, ಆರ್.ಬಿ. ಪೂಜಾರ, ಎಸ್.ಬಿ. ನಿಂಗಾಪೂರ ಇದ್ದರು.

## ಅಂಜಲಿ ಅಂಬಿಗೇರ ಹತ್ಯೆಯ ಆರೋಪಿಯನ್ನು ಬಂಧಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯಲ್ಲಿ ಗಂಗಾಮತ ಸಮಾಜದ ಅಂಜಲಿ ಅಂಬಿಗೇರ ಹತ್ಯೆಯ ಆರೋಪಿಯನ್ನು ಬಂಧಿಸಿ ಕಠಿಣ ಶಿಕ್ಷೆ ವಿಧಿಸುವಂತೆ ಗದಗ ಜಿಲ್ಲಾ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ವಿವಿಧೋದ್ದೇಶಗಳ ಸೇವಾ ಟ್ರಸ್ಟ್ ವತಿಯಿಂದ ಗದಗ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.



ಮನವಿ ಸಲ್ಲಿಸಿ ಮಾತನಾಡಿದ ಟ್ರಸ್ಟ್ ಅಧ್ಯಕ್ಷ ಬಿ.ಎನ್. ಯರನಾಳ, ಹುಬ್ಬಳ್ಳಿಯ ಸಹೋದರಿ ನೇಹಾ ಹಿರೇಮಠ ಹತ್ಯೆಯ ವಿಷಯ ಮಾಸುವ ಮುನ್ನವೇ ಅಂಜಲಿ ಅಂಬಿಗೇರ ಭೀಕರವಾಗಿ ಹತ್ಯೆಯಾಗಿದ್ದಾಳೆ. ಅಂಜಲಿಯ ಹತ್ಯೆಯಿಂದ ಇಡೀ ಕುಟುಂಬವೇ ಬೀದಿಗೆ ಬಂದಂತಾಗಿದೆ. ಕಾರಣ, ಕೂಡಲೇ ಹತ್ಯೆಗೈದ ಆರೋಪಿಯನ್ನು ಬಂಧಿಸಿ ಸಮಾಜದಲ್ಲಿ ಇಂತಹ ಘಟನೆಗಳು ಮರುಕಳಿಸಂದತೆ ಆರೋಪಿಗೆ ಉಗ್ರವಾದ ಶಿಕ್ಷೆಯನ್ನು ವಿಧಿಸಬೇಕು ಹಾಗೂ ಅಂಜಲಿ ಕುಟುಂಬಕ್ಕೆ ಸೂಕ್ತ ಪರಿಹಾರ ಘೋಷಿಸಬೇಕೆಂದು ರಾಜ್ಯ ಸರ್ಕಾರವನ್ನು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಿ.ಬಿ. ಬಾರಕೇರ, ಆರ್.ಪಿ. ಹುನಗುಂದ, ಮಾರುತಿ, ರಾಮಣ್ಣ ಬಾರಕೇರ, ಗುರು ಎಚ್. ತಿರ್ಲಾಪೂರ, ಯಲ್ಲಪ್ಪ ಎಸ್.ಹುನಗುಂದ, ಕೆ.ಎಸ್. ಬಳಗಾನೂರ, ಯಚ್ಚರಪ್ಪ ಬಾರಕೇರ, ಗುರುಶಾಂತ ಸೂಡಿ, ವಾಸುದೇವ, ಎಸ್. ಎಚ್. ಸುಣಗಾರ, ಅಶೋಕ, ಭಾವನಾ, ವಿಶಾಲಾಲಕ್ಷಿ ಗುಳಬಾಳ, ಪಿ.ಎನ್. ಓಲೆಕಾರ, ನಾಗಪ್ಪ ಸುಣಗಾರ, ವಿ.ಎಸ್. ಬಾರಕೇರ, ಪಿ.ಬಿ. ಬಾರಕೇರ, ಮಾಲತೇಶ ಉಪಸ್ಥಿತರಿದ್ದರು.

## ಉಚಿತ ವೃತ್ತಿ ತರಬೇತಿಗಳಿಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ ಹುಲಕೋಟಿ ಮತ್ತು ಅಗ್ರಿಕಲ್ಚರಲ್ ಸೈನ್ಸ್ ಫೌಂಡೇಶನ್ ಹುಲಕೋಟಿ, ಇವುಗಳ ಸಂಯುಕ್ತ ಆಶ್ರಯದಲ್ಲಿ ಮಹಿಳೆಯರ ಬ್ಯೂಟಿ ಪಾರ್ಲರ್ ತರಬೇತಿಯನ್ನು ಮೇ 29 ರಂದು ಮತ್ತು ಹೈನುಗಾರಿಕೆ ಮತ್ತು ಎರೆಹುಳ ಗೊಬ್ಬರ ತಯಾರಿಕೆ ತರಬೇತಿಯೂ ಜೂನ್ 6 ರಂದು ಆರಂಭವಾಗುತ್ತವೆ. ಮತ್ತು ಅತಿ ಶೀಘ್ರದಲ್ಲಿ ದ್ವಿ-ಚಕ್ರವಾಹನ ರಿಪೇರಿ, ಸಿ.ಸಿ.ಟಿ.ವಿ ಅಳವಡಿಕೆ ಮತ್ತು ರಿಪೇರಿ, ಕುರಿ ಸಾಕಾಣಿಕೆ, ಮಹಿಳೆಯರ ಹೊಲಿಗೆ ತರಬೇತಿ, ಕಂಪ್ಯೂಟರ್ .ಡಿ.ಟಿ.ಪಿ ಈ ಉಚಿತ ತರಬೇತಿಗಳನ್ನು ಆರಂಭಿಸಲಾಗುವುದು, ಆಸಕ್ತ 19ರಿಂದ 44 ವಯಸ್ಸಿನೊಳಗಿನ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕ, ಯುವತಿಯರು, ಸ್ವ ಸಹಾಯ ಗುಂಪಿನವರು ಅರ್ಜಿ ಸಲ್ಲಿಸಬಹುದಾಗಿದೆ. ತರಬೇತಿಗಳು ಊಟ, ವಸತಿಯೊಂದಿಗೆ ಉಚಿತವಾಗಿರುತ್ತದೆ, ಕೇಂದ್ರ ಸರಕಾರದಿಂದ ತರಬೇತಿಯ ಪ್ರಮಾಣ ಪತ್ರ ಸಿಗುತ್ತದೆ, ಮಹಿಳೆಯರಿಗೆ ಪ್ರತ್ಯೇಕ ವಸತಿ ಸೌಲಭ್ಯವಿರುತ್ತದೆ.

ತರಬೇತಿ ಪಡೆಯಲು ಬಯಸುವರು ಗ್ರಾಮೀಣ ಪ್ರದೇಶದಲ್ಲಿ ವಾಸವಾಗಿರಬೇಕು. ಬಿ.ಪಿ.ಎಲ್ ರೇಶನ್ ಕಾರ್ಡ್, ಅಂತ್ಯೋದಯ, ಎ.ಎ.ವಾಯ್, ಪಿ.ಎಚ್.ಎಚ್, ಆದ್ಯತಾ ಕುಟುಂಬ ರೇಶನ್ ಕಾರ್ಡ್ ಅಥವಾ ನರೇಗಾ (ಜಾಬ್) ಕಾರ್ಡ್, ಇವುಗಳಲ್ಲಿ ಯಾವುದಾದರೂ ಒಂದನ್ನು ಹೊಂದಿರಬೇಕು. ಆಧಾರ್ ಕಾರ್ಡ್, ಫೋಟೋ-ರೇಶನ್ ಕಾರ್ಡ್, ಬ್ಯಾಂಕ್ ಪಾಸ್ ಬುಕ್ ದೊಂದಿಗೆ ಎಸ್.ಬಿ.ಆಯ್ ಆರ್‌ಸೆಟಿ ಹುಲಕೋಟಿಯ ಸಂಸ್ಥೆಯಲಿ ದೊರೆಯುವ ಅರ್ಜಿ ಫಾರಂ ತುಂಬಿ ನಿರ್ದೇಶಕರು ಎಸ್‌ಬಿಐಎಸ್ ಎಫ್‌ಆರ್‌ಸೆಟಿ ಸಂಸ್ಥೆ ಹುಲಕೋಟಿ, ಕೃಷಿ ವಿಜ್ಞಾನ ಕೇಂದ್ರ ಆವರಣ, ಹುಲಕೋಟಿ ಇವರಿಗೆ ಅರ್ಜಿಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ-9480880201, 8880169996, 9632287949, 9632635268, 9448874412 ಸಂಪರ್ಕಿಸಬಹುದಾಗಿದೆ.

### ಬಸವದಳದ 'ಶರಣ ಸಂಗಮ' ಕಾರ್ಯಕ್ರಮದಲ್ಲಿ ಶರಣೆ ಗಂಗಾಂಬಿಕೆ ಅಕ್ಕನವರು

## ವಿಶ್ವ ಸಾಹಿತ್ಯಕ್ಕೆ ವಚನಗಳ ಕೊಡುಗೆ ಅಪಾರ

■ ವಿಜಯಸಾಕ್ಷಿ ಸುದ್ದಿ, ಗದಗ

ಬಸವಾದಿ ಶರಣರ ವಚನಗಳು ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದೆ. ವಿಶ್ವ ಸಾಹಿತ್ಯಕ್ಕೆ ಮಹತ್ವದ ಕೊಡುಗೆ ನೀಡಿದೆ. ವಚನ ಸಾಹಿತ್ಯದ ನಾಯಕ ಬಸವಣ್ಣನವರು ಭಾರತದ ಸಾಂಸ್ಕೃತಿಕ ನಾಯಕರಾಗುವ ಕಾಲ ಬಹಳ ದೂರವಿಲ್ಲ. ಅಲ್ಲದೇ ವಿಶ್ವಕ್ಕೆ ಪ್ರಜಾಪ್ರಭುತ್ವವನ್ನು ಮೊಟ್ಟಮೊದಲು ಕೊಟ್ಟ ಕೀರ್ತಿ ಬಸವಣ್ಣನವರದ್ದು. ಸಾಮಾಜಿಕವಾಗಿ, ಆರ್ಥಿಕವಾಗಿ, ಧಾರ್ಮಿಕವಾಗಿ, ಔದ್ಯೋಗಿಕವಾಗಿ, ಶೈಕ್ಷಣಿಕವಾಗಿ, ಸಮಾನತೆಗಾಗಿ, ರಾಜಕೀಯವಾಗಿ, ನ್ಯಾಯಯುತವಾಗಿ, ಹೀಗೆ ಹತ್ತು ಹಲವಾರು ಕ್ರಾಂತಿಗಳನ್ನು ಮಾಡಿದವರು ಬಸವಣ್ಣ ಎಂದು ಶರಣೆ ಗಂಗಾಂಬಿಕೆ ಅಕ್ಕನವರು ಅಭಿಪ್ರಾಯಪಟ್ಟರು.



ಅವರು ಗದುಗಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಬಸವ ಜಯಂತಿ ಅಂಗವಾಗಿ ಏರ್ಪಡಿಸಲಾಗಿದ್ದ ಬಸವದಳದ 1593ನೇ ಶರಣ ಸಂಗಮದಲ್ಲಿ 'ಶರಣರು ಕಂಡ ಬಸವಣ್ಣ' ವಿಷಯದ ಕುರಿತು ಮಾತನಾಡುತ್ತಿದ್ದರು.

ಅತಿಥಿಗಳಾಗಿ ಆಗಮಿಸಿದ ಭದ್ರಾವತಿಯ ಶರಣ ಎಚ್. ಎಸ್. ಬಸವರಾಜಪ್ಪ, ಅಧ್ಯಕ್ಷತೆ ವಹಿಸಿದ್ದ ಶರಣ ವಿ.ಕೆ. ಕರೇಗೌಡ್ರ ಮಾತನಾಡಿದರು. ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಶೇಖಣ್ಣ ಕಳಸಾಪೂರಶೆಟ್ರು ವೇದಿಕೆಯ ಮೇಲಿದ್ದರು.


ಶರಣೆ ಮಂಜುಳಾ ಹಾಸಿಲಕರ ವಚನ ಪ್ರಾರ್ಥನೆ ಹಾಡಿದರು. ಶರಣ ಕೆ.ಎಸ್. ಬಾಳಿಕಾಯಿ ಸ್ವಾಗತಿಸಿದರು. ಪ್ರಾಸ್ತಾವಿಕವಾಗಿ ಪ್ರಕಾಶ ಅಸುಂಡಿಯವರು ಮಾತನಾಡಿದರು. ಗೌರಕ್ಕ ಬಡಿಗಣ್ಣವರ ಕಾರ್ಯಕ್ರಮ ನಿರೂಪಿಸಿದರೆ, ಶರಣು ಸಮರ್ಪಣೆಯನ್ನು ಮಂಗಳಕ್ಕ ಕಾಮಣ್ಣವರ ನೆರವೇರಿಸಿದರು.

ಸಮಾರಂಭದಲ್ಲಿ ಶರಣರಾದ ಎಸ್.ಎನ್. ಹಕಾರಿ, ಎನ್. ಎಚ್. ಹಿರೇಸಕ್ಕರಗೌಡ್ರ, ಬಿ.ವಿ. ಕಾಮಣ್ಣವರ, ಎನ್. ಎಸ್. ಬಡಿಗಣ್ಣವರ, ಎಸ್.ಎ. ಮುಗದ, ಎಂ.ಬಿ. ಲಿಂಗಧಾಳ, ಮೃತ್ಯುಂಜಯ ಜಿನಗಾ, ಮಂಜುನಾಥ ಅಸುಂಡಿ, ಶರಣು ಅಂಗಡಿ, ಮಲ್ಲಣ್ಣ ಜಿನಗಾ, ಸೋಮು ಪುರಾಣಿಕ, ಅನಿಲ ಬುರ್ಲಿ, ಮಹಾಂತೇಶ ಅಂಗಡಿ, ಹಳ್ಳಿಕೇರಿ, ಬಂಡಿ, ಶರಣೆಯರಾದ ಗಿರಿಜಕ್ಕ ಧರ್ಮರಡ್ಡಿ, ಪಾರ್ವತೆಮ್ಮ ಬುರ್ಲಿ, ಜಯಶ್ರೀ ಹಳ್ಳಿಕೇರಿ, ಶಕುಂತಲಾ ಗುಡಗೇರಿ, ಬಸವಶ್ರೀ, ಶಿಲ್ಪಾ ಬುರ್ಲಿ, ಲೀಲಾವತಿ ಬಳ್ಳೊಳ್ಳಿ, ನಾಗರತ್ನ ಅಸುಂಡಿ, ಲಕ್ಷ್ಮೀ ಅಂಗಡಿ, ರೇಣುಕಾ ಹಾಸಿಲಕರ, ಗಿರಿಜಾ ಹಿರೇಮಠ, ರೂಪಾ ಕಾಮಣ್ಣವರ, ಗಂಗಮ್ಮ ಹೂಗಾರ ಮುಂತಾದವರು ಭಾಗವಹಿಸಿದ್ದರು.

## ದಿವ್ಯ ಚೇತನ ಶಾಲೆಗೆ ಉತ್ತಮ ಫಲಿತಾಂಶ







■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸಮೀಪದ ನೀಲಗುಂದ ಗ್ರಾಮದ ದಿವ್ಯ ಚೇತನ ಆಂಗ್ಲ ಮಾಧ್ಯಮ ಶಾಲೆಯು 2023/24ನೇ ಸಾಲಿನ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿಉತ್ತಮ ಫಲಿತಾಂಶ ಸಾಧಿಸಿದೆ.

ರವಿ ಎಂ.ಮರಿಲಿಂಗಪ್ಪನವರ ಶೇ 96.84, ವಿನಾಯಕ ಆರ್. ಕಂಬಳಿ ಶೇ 95.84, ಪ್ರತಿಭಾ ಆರ್.ಕುರ್ತಕೋಟಿ ಶೇ 93.6, ಸಂಜನಾ ವಿ.ಪೂಜಾರ ಶೇ 92.8, ಕೆ.ಎಸ್. ಪ್ರತಾಪರೆಡ್ಡಿ ಶೇ 92.64 ಅಂಕ ಪಡೆಯುವ ಮೂಲಕ ಶಾಲೆಗೆ ಕೀರ್ತಿ ತಂದಿದ್ದಾರೆ. ಸಾಧಕ ವಿದ್ಯಾರ್ಥಿಗಳನ್ನು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ಅಭಿನಂದಿಸಿದ್ದಾರೆ.

## ಮೇ 19ರಂದು 6ನೇ ತರಗತಿ ದಾಖಲಾತಿಗೆ ಪ್ರವೇಶ ಪರೀಕ್ಷೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಗದಗ ಮತ್ತು ಮುಂಡರಗಿ ತಾಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ ಹಾಗೂ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ 2024-25ನೇ ಸಾಲಿಗೆ 6ನೇ ತರಗತಿ ದಾಖಲಾತಿ ಪಡೆಯಲು ಪ್ರವೇಶ ಪರೀಕ್ಷೆ ಮೇ 19ರಂದು ಜರುಗಲಿದೆ.

ಪರೀಕ್ಷಾ ಕೇಂದ್ರಗಳಾದ ಸೇಂಟ್ ಜಾನ್ ಪ್ರಾಥಮಿಕ ಮತ್ತು ಪ್ರೌಢ ಶಾಲೆ, ಹೆಲ್ತ್ ಕ್ಯಾಂಪ್ ಬೆಟಗೇರಿ-ಗದಗ ಮತ್ತು ಡಾ ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ, ಜಿಲ್ಲಾ ಆಸ್ಪತ್ರೆ ಹಿಂದುಗಡೆ, ಮಲ್ಲಸಮುದ್ರದಲ್ಲಿ ನಡೆಯುತ್ತವೆ.

ಈ ಪರೀಕ್ಷಾ ಪ್ರವೇಶ ಪತ್ರಗಳನ್ನು ಮೇ 18ರ ಮಧ್ಯಾಹ್ನದವರೆಗೆ ಮುಂಡರಗಿ ತಾಲೂಕ ಪಂಚಾಯತಿ ಆವರಣದಲ್ಲಿರುವ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ 08371-262911, ಗದಗ ಮೌಲಾನಾ ಆಜಾದ್ ಭವನದಲ್ಲಿರುವ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ 08372-297494, ರೋಣ ತಾಲೂಕ ಪಂಚಾಯತಿ ಆವರಣದಲ್ಲಿರುವ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ 08381-267258, ನರಗುಂದ ತಾಲೂಕಿನ ತಹಸೀಲ್ದಾರ ಕಾರ್ಯಾಲಯದ ರೂ.ನಂ-20 ರಲ್ಲಿರುವ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ-08377-245411, ಶಿರಹಟ್ಟಿಯ ತಾಲೂಕ ಪಂಚಾಯತ ಹತ್ತಿರವಿರುವ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ- 08487-242810 ವನ್ನು ಸಂಪರ್ಕಿಸಬಹುದಾಗಿದೆ. ಪರೀಕ್ಷಾ ಪ್ರವೇಶ ಪತ್ರಗಳಲ್ಲಿ ಸೂಚಿಸಿರುವ ಪರೀಕ್ಷಾ ಕೇಂದ್ರಕ್ಕೆ ಹಾಜರಿರಲು ಈ ಮೂಲಕ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಇವರನ್ನು ಸಂಪರ್ಕಿಸಬಹುದಾಗಿದೆ.

## ನಿಧನ ವಾರ್ತೆ



**ಮೀರಾಬಾಯಿ ಗ್ರಾಮಪುರೋಹಿತ**

ಗದಗ/ಹುಬ್ಬಳ್ಳಿ: ನಿವೃತ್ತ ಡಿಎಫ್‌ಓ ದಿ ಎ.ಕೆ. ಗ್ರಾಮಪುರೋಹಿತ ಇವರ ಪತ್ನಿ, ಹುಬ್ಬಳ್ಳಿಯ ವೆಂಕಟೇಶ್ವರ ನಗರದ ನಿವಾಸಿ ಶ್ರೀಮತಿ ಮೀರಾಬಾಯಿ ಅನಂತರಾವ್ ಗ್ರಾಮಪುರೋಹಿತ(87) ಇತ್ತೀಚೆಗೆ ನಿಧನರಾದರು. ಮೃತರು ಓರ್ವ ಪುತ್ರ, ಓರ್ವ ಪುತ್ರಿ, ಸೊಸೆ, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗ ಅಗಲಿದ್ದಾರೆ.

### ಬರ ಪರಿಹಾರ, ಸಹಾಯಧನವನ್ನು ರೈತರ ಅನುಮತಿ ಇಲ್ಲದೆ ಸಾಲಕ್ಕೆ ಹೊಂದಾಣಿಕೆ ಮಾಡದಿರಲು ಡಿಸಿ ಸೂಚನೆ

# ನಿರ್ದೇಶನ ಉಲ್ಲಂಘಿಸಿದರೆ ಕಾನೂನು ಕ್ರಮ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ರಾಜ್ಯ ಸರಕಾರದಿಂದ ನೇರವಾಗಿ ರೈತರ ಬ್ಯಾಂಕ್ ಖಾತೆಗೆ ಜಮೆ ಮಾಡುವ ಬರ ಪರಿಹಾರ, ವಿವಿಧ ಯೋಜನೆಗಳ ಸಹಾಯಧನ, ಸಾಮಾಜಿಕ ನೆರವು ಯೋಜನೆಯ ಸಹಾಯಧನವನ್ನು ರೈತರ ಒಪ್ಪಿಗೆ ಇಲ್ಲದೆ ಅವರ ಸಾಲದ ಖಾತೆಗೆ ಹಣ ಹೊಂದಾಣಿಕೆ ಮಾಡದಿರುವಂತೆ ಲೀಡ್ ಬ್ಯಾಂಕ್ ವ್ಯವಸ್ಥಾಪಕರ ಮೂಲಕ ಈಗಾಗಲೇ ಸಾಕಷ್ಟು ಬಾರಿ ಎಲ್ಲ ಬ್ಯಾಂಕ್‌ಗಳಿಗೆ ತಿಳಿಸಲಾಗಿದೆ. ಆದಾಗ್ಯೂ ಕುಂದಗೋಳ, ನವಲಗುಂದ ಸೇರಿ ಕೆಲವು ಕಡೆ ಬ್ಯಾಂಕಗಳು ಪರಿಹಾರ ಹಣವನ್ನು ರೈತರ ಸಾಲಕ್ಕೆ ಹೊಂದಿಸುತ್ತಿರುವ ಕುರಿತು ದೂರು, ವರದಿಗಳು ಬರುತ್ತಿವೆ. ಈ ವಿಷಯದಲ್ಲಿ ಸರಕಾರ ಮತ್ತು ಜಿಲ್ಲಾಡಳಿತ ನೀಡಿರುವ ನಿರ್ದೇಶನ ಉಲ್ಲಂಘಿಸಿದರೆ ಅಂತಹ ಬ್ಯಾಂಕಗಳ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುತ್ತದೆ ಎಂದು ಜಿಲ್ಲಾ ಬ್ಯಾಂಕರ್ಸ್ ಪ್ರಗತಿ ಪರಿಶೀಲನಾ ಸಮಿತಿಯ ಸಹ ಅಧ್ಯಕ್ಷರಾಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ.



ಈ ಕುರಿತು ಪ್ರಕಟಣೆ ನೀಡಿರುವ ಅವರು, 2024ರ ಮುಂಗಾರು ವಿಫಲವಾಗಿದ್ದರಿಂದ ರಾಜ್ಯ ಸರಕಾರ ಧಾರವಾಡ ಜಿಲ್ಲೆಯ ಎಲ್ಲ ತಾಲೂಕುಗಳನ್ನು ಬರಪಡೀತ ತಾಲೂಕುಗಳೆಂದು ಘೋಷಣೆ ಮಾಡಿ, ಸರಕಾರದ ನಿಯಮಾವಳಿಗಳ ಪರಿಹಾರ ಹಣ, ಇತರ ಸೌಲಭ್ಯಗಳನ್ನು ಬಿಡುಗಡೆ ಮಾಡುತ್ತಿದೆ. ಮುಖ್ಯವಾಗಿ ಪ್ರಸಕ್ತ ಸಾಲಿನ ಮುಂಗಾರು ಹಂಗಾಮು ಆರಂಭವಾಗುತ್ತಿರುವದರಿಂದ ರೈತರು ಭೂಮಿ ಉಳುಮೆ ಮಾಡಿ ಬಿತ್ತನೆಗೆ ಸಿದ್ದಗೊಳಿಸಬೇಕು, ಬೀಜ, ಗೊಬ್ಬರ ಖರೀದಿಸಬೇಕು. ಅವರ ನೆರವಿಗಾಗಿ ರಾಜ್ಯ ಸರಕಾರವು ರೈತರ ಬ್ಯಾಂಕ್ ಖಾತೆಗಳಿಗೆ ಡಿಬಿಟಿ ಮೂಲಕ ನೇರವಾಗಿ ಬರಪರಿಹಾರ ಜಮೆ ಮಾಡುತ್ತಿದೆ ಎಂದು ಅವರು ತಿಳಿಸಿದ್ದಾರೆ.

ರೈತರಿಗೆ ಸರಕಾರಗಳಿಂದ ನೀಡುವ ಸಹಾಯಧನ, ಸಬ್ಸಿಡಿ, ಬರಪರಿಹಾರ ಮುಂತಾದವುಗಳನ್ನು ರೈತರ ಬ್ಯಾಂಕ್ ಸಾಲದ ಖಾತೆಗೆ ಹೊಂದಾಣಿಕೆ ಮಾಡದಂತೆ ರಾಜ್ಯ ಸರಕಾರ ಮತ್ತು ರಾಜ್ಯಮಟ್ಟದ ಬ್ಯಾಂಕರ್ಸ್ ಕಮೀಟಿ ಸೂಚಿಸಿವೆ. ಈ ಕುರಿತು ಪತ್ರವನ್ನೂ ಹೊರಡಿಸಿವೆ. ಅದರಂತೆ ಧಾರವಾಡ ಜಿಲ್ಲಾಡಳಿತವು ಕಳೆದ ವರ್ಷ ಮತ್ತು ಈ ವರ್ಷದಲ್ಲಿ ಲೀಡ್ ಬ್ಯಾಂಕ್ ವ್ಯವಸ್ಥಾಪಕರ ಮೂಲಕ ಜಿಲ್ಲೆಯ ಪ್ರತಿ ಬ್ಯಾಂಕ್ ಮುಖ್ಯಸ್ಥರಿಗೆ, ವ್ಯವಸ್ಥಾಪಕರಿಗೆ ಮಾಹಿತಿ ನೀಡಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

## ವೈಭವದ ಶ್ರೀ ಅನ್ನದಾನೇಶ್ವರ ಮಹಾ ರಥೋತ್ಸವ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಅಬ್ಬಿಗೇರಿಯಲ್ಲಿ ಹಾಲಕೆರೆ ಶ್ರೀ ಗುರು ಅನ್ನದಾನೇಶ್ವರರ ಶಾಖಾ ಮಠದ ಮಹಾ ರಥೋತ್ಸವವು ಸಡಗರ ಸಂಭ್ರಮದಿಂದ ವೈಭವಯುತವಾಗಿ ಸಹಸ್ರಾರು ಭಕ್ತರ ಸಮ್ಮುಖದಲ್ಲಿ ಜರುಗಿತು.

ಸಂಜೆ 6ಕ್ಕೆ ಶ್ರೀ ಅನ್ನದಾನೇಶ್ವರ ಮಹಾರಥೋತ್ಸವಕ್ಕೆ ಹಾಲಕೆರೆಯ ಮುಪ್ಪಿನ ಬಸವಲಿಂಗ ಸ್ವಾಮೀಜಿಯವರು ಚಾಲನೆ ನೀಡಿದರು. ಶಾಖಾ ಶಿವಯೋಗ ಮಂದಿರ ನಿಡಗುಂದಿಕೊಪ್ಪದ ಅಭಿನವ ಚನ್ನಬಸವ ಸ್ವಾಮೀಜಿ, ಬನವಾಸಿಯ ಶಿವಲಿಂಗ ದೇಶಿಕರು ಸಮ್ಮುಖ ವಹಿಸಿದ್ದರು. ಗ್ರಾಮದ ಸುತ್ತಮುತ್ತಲಿನ ಊರುಗಳಿಂದ ಡೊಳ್ಳು, ಭಜನೆ ಸಕಲ ವಾದ್ಯ ವೈಭವದೊಂದಿಗೆ ಭಕ್ತರು ಭಾಗವಹಿಸಿದ್ದರು.

ಮರವಣಿಗೆಯುದ್ದಕ್ಕೂ ಕರಡಿ ಮಜಲು, ಜಾಂಜ್ ಮೇಳ, ಭಜನೆ ಮುಂತಾದವುಗಳು ಜಾತ್ರೆಯ ಸಡಗರವನ್ನು ಹೆಚ್ಚಿಸಿದ್ದವು. 150ಕ್ಕೂ ಹೆಚ್ಚು ಸುಮಂಗಲೆಯರು ಆರತಿಯನ್ನು ಹಿಡಿದು ತೇರಿನ ಹಿಂದೆ ಸಾಗಿದರು. ಸಂಜೆಯಾಗುತ್ತಿದ್ದಂತೆ ಹಾಲಕೆರೆಯ ಶ್ರೀಮಠದ ಪರಮಪೂಜ್ಯ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಮತ್ತು ಹರಗುರು ಚರ ಮೂರ್ತಿಗಳು, ಗಣ್ಯರು ರಥದ ಗಾಲಿಗಳಿಗೆ ಪೂಜೆ ನೆರವೇರಿಸಿದ ನಂತರ ಸೇರಿದ್ದ ಸಹಸ್ರಾರು ಭಕ್ತರು ತೇರನ್ನು ಎಳೆದರು. ಗ್ರಾಮದ ಪ್ರಮುಖ ಬೀದಿಯಲ್ಲಿ ಚಲಿಸಿದ ರಥವು ಮರಳಿ ಸ್ವಸ್ಥಾನ ಸೇರಿದಾಗ ಸಂತೋಷದಿಂದ ಚಪ್ಪಾಳೆ ತಟ್ಟಿ ಭಕ್ತಿಭಾವ ಮೆರದರು.

## ಬಸ್ ಘಟಕ, ಚಾಲಕರ ತರಬೇತಿ ಕೇಂದ್ರಕ್ಕೆ ಭೇಟಿ



■ವಿಜಯಸಾಕ್ಷಿ ಸುದ್ದಿ, ಹಾವೇರಿ

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಪ್ರಿಯಾಂಗಾ ಎಂ. ಅವರು ಗುರುವಾರ ಹಾವೇರಿ ವಿಭಾಗ ವ್ಯಾಪ್ತಿಯ ಶಿಗ್ಗಾಂವ ಪಟ್ಟಣದಲ್ಲಿ ನೂತನವಾಗಿ ನಿರ್ಮಾಣಗೊಳ್ಳುತ್ತಿರುವ ಬಸ್ ಘಟಕ ಹಾಗೂ ಚಾಲಕರ ತರಬೇತಿ ಕೇಂದ್ರದ ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿ ಪ್ರಗತಿಯನ್ನು ಪರಿಶೀಲನೆ ಮಾಡಿದರು. ಕಾಮಗಾರಿ ಕಾರ್ಯವನ್ನು ಗುಣಮಟ್ಟದೊಂದಿಗೆ ತ್ವರಿತಗತಿಯಲ್ಲಿ ನಿರ್ವಹಿಸಲು ಸಂಸ್ಥೆಯ ಸಂಬಂಧಪಟ್ಟ ಅಧಿಕಾರಿಗಳು ಮತ್ತು ಕಾಮಗಾರಿ ಗುತ್ತಿಗೆದಾರರಿಗೆ ಸೂಚನೆಗಳನ್ನು ನೀಡಿದರು.

ಇದೇ ಸಂದರ್ಭದಲ್ಲಿ ಸವಣೂರು ಬಸ್ ನಿಲ್ದಾಣ ಮತ್ತು ಘಟಕಕ್ಕೆ ಭೇಟಿ ನೀಡಿ ಅನುಸೂಚಿಗಳ ಕಾರ್ಯಾಚರಣೆ ಪರಿಶೀಲನೆ ಮಾಡಿ, ಮುಂದಿನ ದಿನಗಳಲ್ಲಿ ಶಾಲಾ ಕಾಲೇಜುಗಳು ಪ್ರಾರಂಭವಾಗುವುದರಿಂದ ಸಾರ್ವಜನಿಕ ಪ್ರಯಾಣಿಕರು ಮತ್ತು ವಿದ್ಯಾರ್ಥಿ ಸಮುದಾಯಕ್ಕೆ ಯಾವುದೇ ರೀತಿಯ ಅನಾನುಕೂಲತೆ ಆಗದಂತೆ ಸುಗಮ ಸಾರಿಗೆ ಕಾರ್ಯಾಚರಣೆ ಮಾಡಲು ಸಂಸ್ಥೆಯ ಅಧಿಕಾರಿಗಳಿಗೆ ಸೂಚಿಸಿದರು. ಸ್ಥಳದಲ್ಲಿ ಹಾಜರಿದ್ದ ಸಿಬ್ಬಂದಿಗಳ ಕುಂದುಕೊರತೆಗಳನ್ನು ಆಲಿಸಿದರು. ಈ ಸಂದರ್ಭದಲ್ಲಿ ಸಂಸ್ಥೆಯ ವಿಭಾಗದ ಮತ್ತು ಘಟಕದ ಅಧಿಕಾರಿ/ಸಿಬ್ಬಂದಿ ವರ್ಗದವರು ಹಾಜರಿದ್ದರು.

## ಯೋಗ ಸರ್ಟಿಫಿಕೇಟ್ ಕೋರ್ಸ್ ಪರೀಕ್ಷೆ ಫಲಿತಾಂಶ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡ ಇವರ ಸಂಯೋಜನೆಯಲ್ಲಿ ಎಸ್‌ವಾಯ್‌ಬಿಎಂಎಸ್ ಯೋಗಪಾಠಶಾಲೆಯ ಬಸವ ಯೋಗ ಕೇಂದ್ರ ಗದಗ ನಡೆಸಿದ 2022–2023ನೇ ಸಾಲಿನ ಸರ್ಟಿಫಿಕೇಟ್ ಕೋರ್ಸ್ ಇನ್ ಯೋಗ ಸ್ಟಡೀಸ್ (CYS) ಕೋರ್ಸ್‌ನ ಪರೀಕ್ಷೆ ಫಲಿತಾಂಶ ಪ್ರಕಟವಾಗಿದ್ದು, ಬಸವ ಯೋಗ ಕೇಂದ್ರದಲ್ಲಿ ಪರೀಕ್ಷೆಗೆ ಹಾಜರಾದ ಒಟ್ಟು 30 ವಿದ್ಯಾರ್ಥಿಗಳಲ್ಲಿ 24 ವಿದ್ಯಾರ್ಥಿಗಳು ವಿಶೇಷ ಉನ್ನತ ಶ್ರೇಣಿ (First Class with Distingtion)ಯಲ್ಲಿ ಉತ್ತೀರ್ಣರಾಗಿದ್ದಾರೆ.

ಇವರಲ್ಲಿ ಶ್ರೀಕೃಷ್ಣ ಆವಟಿ, ಭೀಮಾಂಬಿಕಾ ಪಾಟೀಲ, ಪವಿತ್ರಾ ಎಂ.ಡಿ. ಇವರು ಹೆಚ್ಚಿನ ಅಂಕ ಗಳಿಸಿ ಕೇಂದ್ರಕ್ಕೆ ಕ್ರಮವಾಗಿ ಪ್ರಥಮ, ದ್ವಿತೀಯ, ತೃತೀಯ ಸ್ಥಾನ ಪಡೆದಿದ್ದಾರೆ.

ಯೋಗ ಸರ್ಟಿಫಿಕೇಟ್ ಕೋರ್ಸ್ ಪರೀಕ್ಷೆಯಲ್ಲಿ ಹೆಚ್ಚಿನ ಸ್ಥಾನ ಗಳಿಸಿದ ಮತ್ತು ಉತ್ತೀರ್ಣರಾದ ಎಲ್ಲ ವಿದ್ಯಾರ್ಥಿಗಳಿಗೆ ಬಸವ ಯೋಗ ಕೇಂದ್ರದ ಅಧ್ಯಕ್ಷರಾದ ಪೂಜ್ಯಶ್ರೀ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು, ಚೇರಮನ್ ಪ್ರೊ. ಎಸ್.ವಿ. ಸಂಕನೂರ, ಆಡಳಿತಾಧಿಕಾರಿ ಪ್ರೊ. ಎಸ್. ಎಸ್. ಪಟ್ಟಣಶೆಟ್ಟಿ, ಪ್ರಾಚಾರ್ಯ ಕೆ.ಎಸ್. ಪಲ್ಲೇದ, ಹಳೆಯ ವಿದ್ಯಾರ್ಥಿ ಸಂಘದ ಅಧ್ಯಕ್ಷ ಡಾ. ಆಯ್.ಬಿ. ಕೊಟ್ಟೂರಶೆಟ್ಟಿ ಮತ್ತು ಸಿಬ್ಬಂದಿ ವರ್ಗದವರು ಅಭಿನಂದನೆಗಳನ್ನು ತಿಳಿಸಿದ್ದಾರೆ.

## ಎಸ್ಸೆಸ್ಸೆಲ್ಸಿಯಲ್ಲಿ ಉತ್ತಮ ಫಲಿತಾಂಶ







■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಎಸ್‌ಜೆಜೆಎಂ ಸಂಯುಕ್ತ ಪದವಿಪೂರ್ವ ಮಾಹಾವಿದ್ಯಾಲಯದ ಪ್ರೌಢಶಾಲೆಯ 2023/24ನೇ ಸಾಲಿನ ಎಸ್ಸೆಸ್ಸೆಲ್ಸಿ ವಾರ್ಷಿಕ ಪರೀಕ್ಷೆಯಲ್ಲಿ ಜಾಫರಸಾಧಿಕ್ ಶೇಖ 556 ಅಂಕ ಪಡೆದು ಪ್ರಥಮ ಸ್ಥಾನ, ಸುಪ್ರೀತಾ ಹುರಕಡ್ಲಿ 514 ಅಂಕ ಪಡೆದು ದ್ವಿತೀಯ ಸ್ಥಾನ, ಲಕ್ಷ್ಮೀ ಚಳ್ಳಣ್ಣವರ 502 ಅಂಕ ಪಡೆದು ಶಾಲೆಗೆ ಕೀರ್ತಿ ತಂದಿದ್ದಾರೆ ಎಂದು ಪ್ರಾಚಾರ್ಯ ಇ.ಎಂ. ಗುಳೆದಗುಡ್ಡ ಪ್ರಕಟಣೆಗೆ ತಿಳಿಸಿದ್ದಾರೆ.

### ರೇಣುಕಾಚಾರ್ಯ ಯುಗಮಾನೋತ್ಸವ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

## ಬಾಳಿನ ಭಾಗ್ಯೋದಯಕ್ಕೆ ಧರ್ಮವೇ ದಿಕ್ಸೂಚಿ

■ವಿಜಯಸಾಕ್ಷಿ ಸುದ್ದಿ, ಕಾಳಗಿ (ಕಲಬುರಗಿ)

ಬದುಕು ಭಗವಂತ ಕೊಟ್ಟ ಅಮೂಲ್ಯ ಕೊಡುಗೆ. ಅರಿವು–ಆದರ್ಶಗಳ ಮೂಲಕ ಬದುಕನ್ನು ಕಟ್ಟಿಕೊಳ್ಳಬೇಕಾಗಿದೆ. ಜೀವನ ಉನ್ನತಿಗೆ ಶ್ರೀ ಜಗದ್ಗುರು ರೇಣುಕಾಚಾರ್ಯರ ಚಿಂತನಗಳು ಸಕಲರ ಬಾಳಿಗೂ ದಾರಿದೀಪ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ಕಾಳಗಿ ಶ್ರೀ ನೀಲಕಂಠ ಕಾಳೇಶ್ವರ ಕಲ್ಯಾಣ ಮಂಟಪದಲ್ಲಿ ಜರುಗಿದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಬಾಳಿನ ಭಾಗ್ಯೋದಯಕ್ಕೆ ಧರ್ಮವೇ ದಿಕ್ಸೂಚಿ. ಧರ್ಮದ ದಾರಿ ಮೀರಿ ನಡೆದರೆ ಅಪಾಯ ತಪ್ಪಿದ್ದಲ್ಲ. ಶ್ರೀ ಜಗದ್ಗುರು ರೇಣುಕಾಚಾರ್ಯರು ಕರ್ಮವನ್ನು ಕಳೆದು ಧರ್ಮವನ್ನು ಬಿತ್ತಿ, ಬದುಕನ್ನು ಬಂಗಾರಗೊಳಿಸಿದ ಕೀರ್ತಿ ಅವರದು. ನೊಂದವರ, ಬೆಂದವರ ಧ್ವನಿಯಾಗಿ ಧಾರ್ಮಿಕ ಮತ್ತು ಸಾಮಾಜಿಕ ಸತ್ಕ್ರಾಂತಿಗೈದು ಜನ ಕಲ್ಯಾಣವನ್ನು ಉಂಟು



ಮಾಡಿದ್ದನ್ನು ಮರೆಯಲಾಗದು ಎಂದರು.

ಚಿಂಚೋಳಿ ಶಾಸಕ ಡಾ.ಅವಿನಾಶ ಜಾಧವ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿ, ಪ್ರತಿಯೊಬ್ಬರಿಗೂ ಧರ್ಮ ಬೇಕಾಗಿದೆ. ಅಶಾಂತಿ–ಅಜ್ಞಾನದಿಂದ ತತ್ತರಿಸುತ್ತಿರುವ ಜನ ಸಮುದಾಯಕ್ಕೆ ಧರ್ಮವೊಂದೇ ಆಶಾಕಿರಣ. ವೀರಶೈವ ಧರ್ಮ ಆದರ್ಶ ಮೌಲ್ಯಗಳನ್ನು ಪ್ರತಿಪಾದಿಸಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರ ವಿಚಾರ ಧಾರೆಗಳು ಸರ್ವ ಕಾಲಕ್ಕೂ ಅನ್ವಯವಾಗುತ್ತವೆ ಎಂದರು. ನೇತೃತ್ವ ವಹಿಸಿದ ಹೊನ್ನಕಿರಣಗಿ ಚಂದ್ರಗುಂಡ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಕಾಳಗಿ ಪಟ್ಟಣದ ಇತಿಹಾಸದಲ್ಲಿ ಇದು ಅವಿಸ್ಮರಣೀವಾದ ಸಮಾರಂಭ. ಪ್ರಪ್ರಥಮವಾಗಿ ಶ್ರೀ ರಂಭಾಪುರಿ ಜಗದ್ಗುರುಗಳು ಆಗಮಿಸಿರುವುದು ಈ ಭಾಗದ ಭಕ್ತರ ಸೌಭಾಗ್ಯವೆಂದರು.

ಸಮಾರಂಭದಲ್ಲಿ ಭರತನೂರ ಚಿಕ್ಕಗುರುನಂಜೇಶ್ವರ ಸ್ವಾಮಿಗಳು, ಮಂಗಲಗಿ ತೆಂಗಳಿ ಶಾಂತಸೋಮನಾಥ ಶಿವಾಚಾರ್ಯರು, ಹೊಸಳ್ಳಿ ಸಿದ್ಧಲಿಂಗ ಶಿವಾಚಾರ್ಯರು, ರಟಕಲ್ ರೇವಣಸಿದ್ಧ ಶಿವಾಚಾರ್ಯರು, ಬಣಮಗಿ ರಾಚೋಟೇಶ್ವರ ಶಿವಾಚಾರ್ಯರು, ಡೊಣ್ಣೂರ ಪ್ರಶಾಂತ ದೇವರು, ಕಾಳಗಿ ನೀಲಕಂಠ ಮರಿದೇವರು ಉಪಸ್ಥಿತರಿದ್ದರು. ಸ್ವಾಗತ ಸಮಿತಿ ಗೌರವಾಧ್ಯಕ್ಷ ಶಿವರಾಜ ಪಾಟೀಲ ಗೋಣಗಿ, ಸ್ವಾಗತ ಸಮಿತಿ ಅಧ್ಯಕ್ಷ ನಾಗರಾಜ ಚಿಕ್ಕಮಠ, ಪ್ರಚಾರ ಸಮಿತಿ ಅಧ್ಯಕ್ಷ ಮಲ್ಲಿನಾಥ ಪಾಟೀಲ, ಕಲಬುರ್ಗಿ ಶಿವಶರಣಪ್ಪ ಸೀರಿ ಮೊದಲಾದ ಗಣ್ಯರು ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರುರಕ್ಷೆ ಸ್ವೀಕರಿಸಿದರು. ಭಕ್ತ ಕುಂಬಾರ ಸಮಾರಂಭವನ್ನು ನಿರೂಪಿಸಿದರು.

ಸಮಾರಂಭಕ್ಕೂ ಮುನ್ನ ಕಾಳಗಿ ಪಟ್ಟಣದಲ್ಲಿ ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳ ಅಡ್ಡಪಲ್ಲಕ್ಕಿ ಮಹೋತ್ಸವ ಸಂಭ್ರಮದಿಂದ ಜರುಗಿತು. ಇತಿಹಾಸ ಪ್ರಸಿದ್ಧ ಪ್ರಾಚೀನ ಶ್ರೀ ನೀಲಕಂಠ ಕಾಳೇಶ್ವರ ದೇವಸ್ಥಾನಕ್ಕೆ ಶ್ರೀ ರಂಭಾಪುರಿ ಜಗದ್ಗುರುಗಳು ಭೇಟಿಯಿತ್ತು ಪುಷ್ಪಾರ್ಚನೆ, ಪೂಜೆ ಸಲ್ಲಿಸಿದರು.

ಅಸ್ಪೃಶ್ಯರ ಉದ್ಧಾರ, ಮಹಿಳೆಯರಿಗೆ ಧಾರ್ಮಿಕ ಸ್ವಾತಂತ್ರ್ಯ, ರೈತ ಸಮುದಾಯದ ಹಿತಕ್ಕಾಗಿ ಸದಾ ಶ್ರಮಿಸಿ ಜೀವ ಸಂಕುಲವನ್ನು ಸಂರಕ್ಷಿಸಿದ್ದಾರೆ. ದೇಶಕ್ಕೊಂದು ಸಂವಿಧಾನ ಇರುವಂತೆ ಧರ್ಮಕ್ಕೊಂದು ನೀತಿ ಸಂಹಿತೆಯಿದೆ. ಅಷ್ಟಾವರಣ, ಪಂಚಾಚಾರ ಮತ್ತು ಷಟ್ಸ್ಥಲಗಳು ಜೀವನದ ಉನ್ನತಿಗೆ ಅಡಿಪಾಯವಾಗಿವೆ. ಅಂಥ ತತ್ವ ಸಿದ್ಧಾಂತಗಳನ್ನು ಅರಿತು ಬಾಳುವುದರಲ್ಲಿ ಮಾನವನ ಶ್ರೇಯಸ್ಸಿದೆ. ಕಾಳಗಿ ತಾಲೂಕಾ ಕೇಂದ್ರದಲ್ಲಿ ಎಲ್ಲರೂ ಒಗ್ಗಟ್ಟಿನಿಂದ ಭಕ್ತಿ ಶ್ರದ್ಧೆಯಿಂದ ಭವ್ಯ ಸಮಾರಂಭ ಹಮ್ಮಿಕೊಂಡಿರುವುದು ಸಂತೋಷ ತಂದಿದೆ ಎಂದು ರಂಭಾಪುರಿ ಶ್ರೀಗಳು ನುಡಿದರು.

### ಮಕ್ಕಳಿಲ್ಲದ ದಂಪತಿಗಳಿಗೆ ಸೇವಾಭಾರತಿ ಟ್ರಸ್ಟ್‌ನಿಂದ ದತ್ತುಮಗು ಹಸ್ತಾಂತರ

## ಮಗುವಿಗೆ ಉತ್ತಮ ಸಂಸ್ಕಾರ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ದತ್ತು ಮಗುವನ್ನು ಪಡೆದುಕೊಂಡ ಪಾಲಕ–ಪೋಷಕರು ಮಗುವಿಗೆ ಉತ್ತಮ ಸಂಸ್ಕಾರ, ಸಂಸ್ಕೃತಿ, ಉನ್ನತ ಶಿಕ್ಷಣ ನೀಡಿ ಅವರನ್ನು ಸತ್ಪ್ರಜೆಗಳನ್ನಾಗಿ ಮಾಡಲು ಮುಂದಾಗಬೇಕೆಂದು ಬೆಟಗೇರಿಯ ನೀಲಕಂಠ ಮಠದ ಪೂಜ್ಯ ನೀಲಕಂಠ ಪಟ್ಟದಾರ್ಯ ಮಹಾಸ್ವಾಮಿಗಳು ಹೇಳಿದರು.

ಅವರು ಬೆಟಗೇರಿಯ ಸೇವಾಭಾರತಿ ಟ್ರಸ್ಟ್‌ನ ಅಮೂಲ್ಯ (ಪಿ) ವಿಶೇಷ ದತ್ತು ಸ್ವೀಕಾರ ಸಂಸ್ಥೆಯಲ್ಲಿ ಪೋಷಣೆಗೊಂಡ ಮಗುವನ್ನು ಬೆಂಗಳೂರಿನ ಮಕ್ಕಳಿಲ್ಲದ ದಂಪತಿಗಳಿಗೆ ಕಾನೂನಿನ ಚೌಕಟ್ಟಿನಲ್ಲಿ ಹಸ್ತಾಂತರಿಸಿ ಮಾತನಾಡಿದರು.

ಎಲ್ಲಿಯೋ ಜನ್ಮತಾಳಿದ ಮಕ್ಕಳು ಇನ್ನೆಲ್ಲೋ ಪೋಷಣೆಗೊಂಡು ದತ್ತು ಪೋಷಕರ ಕಾಳಜಿಯೊಂದಿಗೆ ಬೆಳೆಯುತ್ತಿದ್ದು, ಅಂತಹ ಮಕ್ಕಳ ಬದುಕು ಸುಂದರವಾಗಿ ರೂಪುಗೊಳ್ಳಲಿ. ಪರಿತ್ಯಕ್ತ ಮಕ್ಕಳ ಹಾಗೂ ಅನೈತಿಕ ಸಂಬಂಧಗಳಿಂದಾಗಿ ಜನ್ಮತಾಳುವ



ಮಕ್ಕಳ ಸಂಖ್ಯೆ ಕಡಿಮೆಯಾಗಿ ಸುಸಂಸ್ಕೃತ ಸಮಾಜದಲ್ಲಿ ಸಂಸ್ಕಾರಯುತ ದಂಪತಿಗಳಿಗೆ ಸಂಸ್ಕಾರ, ಸಂಸ್ಕೃತಿಯುಳ್ಳ ಮಕ್ಕಳು ಬರಲೆಂದರು.

ಸೇವಾಭಾರತಿ ಟ್ರಸ್ಟ್‌ನ ಅಮೂಲ್ಯ ವಿಶೇಷ ದತ್ತು ಸ್ವೀಕಾರ ಸಂಸ್ಥೆ ಉತ್ತಮ ರೀತಿಯಲ್ಲಿ ಕಾರ್ಯ ಮಾಡುತ್ತಿದೆ. ಪರಿತ್ಯಕ್ತ ಮಕ್ಕಳನ್ನು ಪೋಷಿಸಿ ಮಕ್ಕಳಿಲ್ಲದ ದಂಪತಿಗಳ ಮಡಿಲಿಗೆ ಕಾನೂನಾತ್ಮಕವಾಗಿ ದತ್ತು ನೀಡುತ್ತಿರುವದು ಮಗುವಿಗೆ ಭವಿಷ್ಯ ನೀಡಿದಂತೆ ಹಾಗೂ ಮಕ್ಕಳಿಲ್ಲದ ದಂಪತಿಗಳ ಕೊರಗು ನೀಗಿಸಿದಂತಾಗುವದು ಎಂದು ಬಣ್ಣಿಸಿದರು.

ಅತಿಥಿಗಳಾಗಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಫೀಕಾ ಹಳ್ಳೂರ,

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಹುಬ್ಬಳ್ಳಿಯ ಕರ್ನಾಟಕ ಚೇಂಬರ್ ಆಫ್ ಕಾಮರ್ಸ್ & ಇಂಡಸ್ಟ್ರೀಸ್‌ನ ಅಧ್ಯಕ್ಷ ಸಿದ್ಧರಾಮ್ಯ ಸಂಶಿಮಠ ಮಾತನಾಡಿ, ಬಹು ವರ್ಷಗಳಿಂದ ಈ ಸಂಸ್ಥೆ ಉತ್ತಮ ಕೆಲಸ ಮಾಡುತ್ತಿದೆ. ಮಕ್ಕಳ ಭವಿಷ್ಯ ನಿರ್ಮಾಣಕ್ಕೆ ತನ್ನನ್ನು ಸಮರ್ಪಿಸಿಕೊಂಡಿರುವ ಈ ಸಂಸ್ಥೆಯ ಕಾರ್ಯ ಶ್ಲಾಘನೀಯ ಎಂದರು.

ಶೋಭಾ ಸಂಶಿಮಠ, ಬೆಟಗೇರಿಯ ಜವಳಿ ವ್ಯಾಪಾರಸ್ಥರಾದ ಮೈಲಾರಪ್ಪ ಅರಣಿ, ರಾಷ್ಟ್ರೀಯ ಸ್ವಯಂ ಸೇವಕ ಸಂಘ ಗದಗ ನಗರದ ಸಂಘ ಚಾಲಕರಾದ ಬಸವರಾಜ ನಾಗಲಾಪೂರ ಆಗಮಿಸಿದ್ದರು. ಸಮಾರಂಭದ ಅಧ್ಯಕ್ಷತೆಯನ್ನು ದತ್ತು ಸ್ವೀಕಾರ ಸಂಸ್ಥೆಯ ಅಧ್ಯಕ್ಷ ಮಲ್ಲಿಕಾರ್ಜುನ ಬೆಲ್ಲದ ವಹಿಸಿದ್ದರು.

ಪ್ರಾರಂಭದಲ್ಲಿ ನಾಗವೇಣಿ ಕಟ್ಟಿಮನಿ ಪ್ರಾರ್ಥಿಸಿದರು. ಗುರುಸಿದ್ಧಪ್ಪ ಕೊಣ್ಣೂರ ಸ್ವಾಗತಿಸಿದರು. ಮಂಜುನಾಥ ಚನ್ನಪ್ಪನವರ ಪ್ರಾಸ್ತಾವಿಕವಾಗಿ ಮಾತನಾಡಿದರು. ನರಸಿಂಹ ಕಾಮರ್ತಿ ನಿರೂಪಿಸಿ ವಂದಿಸಿದರು.

ಜಯರಾಜ ಮುಳಗುಂದ, ಲುಕ್ಕಣಸಾ ರಾಜೋಳಿ, ಅಶೋಕ ಅಂಟಿನ, ರಂಜನಾ ಕೋಟಿ, ಶ್ರೀಧರ ಕಾಂಬಳೆ, ಪ್ರಮೋದ ಹಿರೇಮಠ, ಅಭಿಷೇಕ ಮಾಳೋದೆ ಮುಂತಾದವರು ಉಪಸ್ಥಿತರಿದ್ದರು.

## ಮೃತ ಮಕ್ಕಳ ಪಾಲಕರಿಗೆ ಸಾಂತ್ವನ

■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ವಿಜಯಪುರದಲ್ಲಿ ಜರುಗಿದ ದುರ್ಘಟನೆಯಲ್ಲಿ ಗದಗ ನಗರದ ಇಬ್ಬರು ಮಕ್ಕಳು ಮೃತರಾಗಿದ್ದರು.

ಶುಕ್ರವಾರ ಮೃತರಾದ ಮಕ್ಕಳ ಮನೆಗೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶೇಖರಗೌಡ ರಾಮತ್ನಾಳ ಅವರು ಭೇಟಿ ನೀಡಿ ಸಾಂತ್ವನ ಹೇಳಿದರು. ಈ ವೇಳೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು.

ನಂತರ ಅವರು ನಗರದ ಭೀಷ್ಮಕೆರೆ ವೀಕ್ಷಿಸಿ, ಸಾರ್ವಜನಿಕರ ಹಿತದೃಷ್ಟಿಯಿಂದ ಕೆರೆ ಸುತ್ತಲು ಸಂರಕ್ಷಣಾ ಕ್ರಮಗಳನ್ನು ಕೈಗೊಳ್ಳಲು ನಗರಸಭೆ ಮುಂದಾಗಬೇಕು ಎಂದರು.




## ಮೃತ ಯುವತಿಯ ಕುಟುಂಬಕ್ಕೆ ಪರಿಹಾರ ನೀಡಲು ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯ ಕಾಲೇಜು ವಿದ್ಯಾರ್ಥಿನಿ ನೇಹಾ ಹಿರೇಮಠ ಕೊಲೆ ಪ್ರಕರಣ ಮಾಸುವ ಮುನ್ನವೇ ಹುಬ್ಬಳ್ಳಿ ವೀರಾಪುರ ಓಣಿಯ ಅಂಜಲಿ ಹತ್ಯೆಯು ಇಡೀ ರಾಜ್ಯವನ್ನೇ ಬೆಚ್ಚಿ ಬೀಳಿಸಿದೆ. ಅಂಜಲಿ ಅಂಬಿಗೇರ ಕೊಲೆ ಖಂಡನೀಯವಾಗಿದ್ದು, ಕೊಲೆ ಮಾಡಿದ ಆರೋಪಿಗೆ ಗಲ್ಲು ಶಿಕ್ಷೆ ವಿಧಿಸಬೇಕು ಹಾಗೂ ಯುವತಿಯ ಕುಟುಂಬಕ್ಕೆ ಸರ್ಕಾರದಿಂದ 25 ಲಕ್ಷ ರೂಪಾಯಿ ಪರಿಹಾರ ನೀಡಬೇಕು ಎಂದು ಗದುಗಿನ ದಲಿತ ಮಿತ್ರ ಮೇಳದ ಪದಾಧಿಕಾರಿಗಳು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಕುಮಾರ್ ನಡಗೇರಿ, ಉಪಾಧ್ಯಕ್ಷರು ವೆಂಕಟೇಶ್ ದೊಡಮನಿ, ಹುಲುಗಪ್ಪ ವಾಲ್ಮೀಕಿ, ಪ್ರದೀಪ್ ನಡಿಗೇರಿ, ಅಭಿಷೇಕ್ ಹಾದಿಮನಿ, ಮಣಿಕಂಠ ಅಕ್ಕಿಮನಿ, ಸಚ್ಚಿದಾನಂದ ನಡಿಗೇರಿ, ಪರಶುರಾಮ್ ಆಡಿನ, ಬಸವರಾಜ್ ಬನ್ನಿಮರ್ ಅನಿಲ್ ಮುಳ್ಳಾಲ್ ಮುಂತಾದವರಿದ್ದರು.



## ಜೂನ್ 1ರಿಂದ ಹಜರತ್ ರಹಿಮಾನ್ ಶ್ಯಾವಲಿ ಶರಣರ ಉರುಸು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಜೂನ್ 1ರಿಂದ ಪಟ್ಟಣದಲ್ಲಿ ಐತಿಹಾಸಿಕ ದರಗಾದ ಹಜರತ್ ರೈಮಾನ್ ಶಾವಲಿ ಶರಣರ ಉರುಸು ಪ್ರಾರಂಭವಾಗಲಿದೆ ಎಂದು ದರಗಾದ ಶರಣರಾದ ಮಂಜುರ್ ಹುಸೇನ್ ಶಾವಲಿ ಹೇಳಿದರು.

ಪಟ್ಟಣದ ದರಗಾದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಸಾರ್ವಜನಿಕರ ಸಭೆಯಲ್ಲಿ ಅವರು ಮಾತನಾಡಿದರು.

ಜೂನ್ 1ರಂದು ಸಂಜೆ ದರಗಾದಿಂದ ಮೆರವಣಿಗೆ ಮೂಲಕ ಕೊಚಲಾಪುರ ಗ್ರಾಮದಲ್ಲಿ ಇರುವ ಲಕ್ಷ್ಮಮ್ಮನ ಪಲ್ಲಕ್ಕಿಗೆ ಪೂಜೆ ಸಲ್ಲಿಸಿ ನಂತರ ನರೇಗಲ್ಲಿಗೆ ಕರೆದುಕೊಂಡು ಬರಲಾಗುತ್ತಿದೆ. ಪಟ್ಟಣದ ತೆಗ್ಗಿನಕೇರಿ ಓಣಿಯ ಮುಜಾವರ ಮನೆಯಿಂದ ಗಂಧದ ಮೆರವಣಿಗೆ ಹೊರಡುವುದು,



ಜೂನ್ 2ರ ಮುಂಜಾನೆ 6ರಿಂದ 10 ಗಂಟೆಯವರೆಗೆ ಸಾಧು–ಸಂತರಿಗೆ ಅನ್ನ ಸಂತರ್ಪಣೆ, ಸಂಜೆ ಮೆರವಣಿಗೆ ಮೂಲಕ ಲಕ್ಷ್ಮಮ್ಮನ ಪಲ್ಲಕ್ಕಿ ಮರಳಿ ಕೊಚಲಾಪುರ ಗ್ರಾಮಕ್ಕೆ ಕಳಿಸುವ ಜೊತೆಗೆ ಪಟ್ಟಣದಲ್ಲಿ ಮಂಜುರ್ ಹುಸೇನ್ ಶಾವಲಿ ಶರಣರ ಮೆರವಣಿಗೆ ನಡೆಯುತ್ತದೆ. ರಾತ್ರಿ ದೀಪೋತ್ಸವ, ಮದ್ದು ಹಾರಿಸುವುದು ಮತ್ತು ಧರ್ಮ ಪದ್ಧತಿಯಂತೆ ಅನೇಕ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ. ಜೂನ್ 3 ರಂದು ಮರಿ ಉರುಸು ನಡೆಯಲಿದೆ ಎಂದರು.

ಸಭೆಯಲ್ಲಿ ರುದ್ರಮನಿಶ ಶಿವಾಚಾರ್ಯ, ಗಂಗಾಧರ ಕೊಟಗಿ, ಎ.ಎ. ನವಲಗುಂದ, ಬಿ.ಕೆ. ಪೊಲೀಸ್‌ಪಾಟೀಲ, ನಿಂಗಪ್ಪ ಕಣವಿ, ಶರಣಪ್ಪ ಕುರಿ, ಭೀಮಣ್ಣ ಕಿಟಗೇರಿ, ಕಲ್ಮೇಶ ತೊಂಡಿಹಾಳ, ನಜೀರ್ ಸಾಬ್ ಇಟಗಿ, ಡಾ. ಶಿವರಾಜ ಗುರಿಕಾರ, ನಿಂಗಪ್ಪ ಚಲವಾದಿ, ಕಳಕಪ್ಪ ಹತ್ತಿಕಟಗಿ, ಮುತ್ತಣ್ಣ ಹಡಪದ, ಸುರೇಶ ಬಾಗಲಿ, ಶೇಕಪ್ಪ ಕೆಂಗಾರ, ಮೈಲಾರಪ್ಪ ಗೋಡಿ, ಶ್ಯಾಮಣ್ಣ ಹನುಮಸಾಗರ, ಶೇಕಪ್ಪ ಜುಟ್ಲ, ಸಂಗಪ್ಪ ಚಿಮ್ಮನಗಿ, ಸುರೇಶ ಹುನಗುಂದ, ಈರಪ್ಪ ಹುಯಿಲಗೋಳ, ಮೂಕಪ್ಪ ನವಲಗುಂದ, ಅಂದಪ್ಪ ಕುಂಬಾರ, ವೀರಭಸಪ್ಪ ಗೊಡಚಪ್ಪನವರ, ಈರಪ್ಪ ಹಾಲನ್ನವರ, ಯಮನೂರಪ್ಪ ಹುಲಕೋಟಿ ಸೇರಿದಂತೆ ನರೇಗಲ್ಲ ಸುತ್ತಮುತ್ತಲಿನ ಗ್ರಾಮಗಳ ಸರ್ವಧರ್ಮದ ಗುರು–ಹಿರಿಯರು ಹಾಗೂ ಯುವಕರು ಪಾಲ್ಗೊಂಡಿದ್ದರು.

### ವಿಮಾ ಹಣ ಕೊಡಲು ನಿರಾಕರಿಸಿದ ಲೋಂಬಾರ್ಡ ವಿಮಾ ಕಂಪನಿ

## ಪರಿಹಾರದೊಂದಿಗೆ ಹಣ ಪಾವತಿಸಲು ಆದೇಶ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಸರಸ್ವತಪೂರದ ನಿವಾಸಿಗಳಾದ ಪ್ರೀತಿ ಮತ್ತು ಅವರ ಮಗಳಾದ ಪೂರ್ವಿ ಇವರು ತಮ್ಮ ಗಂಡ/ತಂದೆ ಪ್ರಶಾಂತ ಶಾನಭಾಗ್ ಇವರು ಆಯ್‌ಸಿಆಯ್‌ಸಿಆಯ್ ಲೋಂಬಾರ್ಡ ಇವರಲ್ಲಿ ರೂ.1489 ಪ್ರೀಮಿಯಮ್ ಮತ್ತು ಅದರ ಜೊತೆಗೆ ಪಿ.ಎ. ಕವರೇಜ್ ಮಾಲೀಕ ಮತ್ತು ಡ್ರೈವರ್‌ಗೆ ಹೆಚ್ಚಿನ ಮೊತ್ತ ರೂ.375 ಪಾವತಿಸಿ ವಿಮೆಯನ್ನು ಮಾಡಿಸಿದ್ದರು. 11/10/2022ರಂದು ಪ್ರಶಾಂತ ಶಾನಭಾಗ ರಸ್ತೆ ಅಪಘಾತದಲ್ಲಿ ಮರಣ ಹೊಂದಿದರು. ದೂರುದಾರರು ತಮ್ಮ ಗಂಡ/ತಂದೆಯ ವಿಮಾ ಹಣವನ್ನು ಕೊಡುವಂತೆ ಎದುರುದಾರರ ಕಂಪನಿಗೆ ದಾಖಲೆಗಳೊಂದಿಗೆ ಬೇಡಿಕೆಯನ್ನು ಇಟ್ಟಿದ್ದರು. ಎದುರುದಾರರು ಇವರ ಕ್ಲೇಮನ್ನು ನಿರಾಕರಿಸಿ ಪ್ರಶಾಂತ ಶಾನಭಾಗ ಇವರು ಅಪಘಾತದ ಸಮಯದಲ್ಲಿ ಲೈಸನ್ಸ್‌ನನ್ನು




ಹೊಂದಿಲ್ಲದ ಕಾರಣ ದೂರುದಾರರು ವಿಮಾ ಹಣವನ್ನು ಪಡೆಯಲು ಅರ್ಹರಲ್ಲವೆಂದು ಅವರ ಬೇಡಿಕೆಯನ್ನು ನಿರಾಕರಿಸಿದ್ದರು.

ವಿಮಾ ಕಂಪನಿಗೆ ಹಲವು ಬಾರಿ ವಿಮೆ ಹಣವನ್ನು ಪಾವತಿಸಲು ಕೇಳಿಕೊಂಡರೂ ಎದುರುದಾರರು ತಮಗೆ ವಿಮಾ ಹಣ ಅಥವಾ ಪರಿಹಾರ ಕೊಟ್ಟಿಲ್ಲ, ಅಂತಹ ವಿಮಾ ಕಂಪನಿಯವರ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನತೆ ಆಗುತ್ತದೆ ಎಂದು ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ದೂರುದಾರರು 11/07/2023ರಂದು ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದೂರು ಸಲ್ಲಿಸಿದ್ದರು.

ಸದರಿ ದೂರಿನ ಬಗ್ಗೆ ಆಯೋಗದ ಅಧ್ಯಕ್ಷರಾದ ಈಶಪ್ಪ ಭೂತೆ, ಸದಸ್ಯರಾದ ವಿಶಾಲಾಕ್ಷಿ. ಅ. ಬೋಳಶೆಟ್ಟಿ ಹಾಗೂ ಪ್ರಭು. ಸಿ.ಹಿರೇಮಠ ಕೂಲಂಕುಷವಾಗಿ ವಿಚಾರಣೆ ನಡೆಸಿದರು. ಪ್ರಶಾಂತ ಇವರು ಹೊಂದಿದ ಡ್ರೈವಿಂಗ್ ಲೈಸನ್ಸ್ ಅವಧಿಯು 03/04/2022ರವರೆಗೆ ಇದ್ದು ಅವರ ಮರಣವು 11/10/2022ರಲ್ಲಿ ಆಗಿದ್ದು, ಎದುರುದಾರರ ಪ್ರಕಾರ ಅವರು ವಿಮಾ ಹಣವನ್ನು ಪಡೆಯಲು ಅರ್ಹರಲ್ಲರೆಂದು ಹೇಳಿತ್ತು. ದೂರುದಾರರ ವಕೀಲರು ಸಲ್ಲಿಸಿದ ದಾಖಲೆಗಳನ್ನು ಪರಿಗಣಿಸಿದಾಗ ಮೋಟರ್ ವಾಹನದ ಕಾಯ್ದೆಯ ಕಲಂ ಪ್ರಕಾರ ಪ್ರಶಾಂತ ಶಾನಭಾಗ ಇವರ ಲೈಸನ್ಸ್ ಮುಂದಿನ 10 ವರ್ಷದವರೆಗೂ ಅನ್ವಯವಾಗುವ ಅಂಶಗಳನ್ನು ಸಾಬೀತುಪಡಿಸಿದಾಗ ಅದನ್ನು ಪರಿಶೀಲಿಸಿ ನೋಡಿದಾಗ ದೂರುದಾರರು ತಾವು ಕೇಳಿದಂತಹ ವಿಮಾ ಹಣವನ್ನು ಪಡೆಯಲು ಅರ್ಹರಿದ್ದಾರೆಂದು ಆಯೋಗವು ಅಭಿಪ್ರಾಯ ಪಟ್ಟು ಎದುರುದಾರರಿಗೆ ವಿಮಾ ಹಣ ರೂ.15 ಲಕ್ಷದ ಜೊತೆಗೆ ಅವರು ಅನುಭವಿಸಿದ ಮಾನಸಿಕ ಹಿಂಸೆ ಹಾಗೂ ಅನಾನುಕೂಲತೆಗೆ 50 ಸಾವಿರ ರೂ ಪರಿಹಾರ ಮತ್ತು 10 ಸಾವಿರ ರೂ ಪ್ರಕರಣದ ಖರ್ಚು–ವೆಚ್ಚ ಕೊಡುವಂತೆ ಆಯ್‌ಸಿಆಯ್‌ಸಿಆಯ್ ಲೋಂಬಾರ್ಡ ವಿಮಾ ಕಂಪನಿಗೆ ಆಯೋಗವು ಆದೇಶಿಸಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka